

# ಸಿಹಿ ಕಹಿ

ಕನ್ನಡ ದಿನಪತ್ರಿಕೆ, ಬಾಗಲಕೋಟೆ

ಬಾಗಲಕೋಟೆಯಿಂದ ಪ್ರಕಟಿತ

RNI REG No. : KARKAN/2016/75068

**ಸಂಪಾದಕರು : ಮಾರುತಿ ಹೊಸಮನಿ**

Editor : MARUTI BASAVANTAPPA HOSAMANI

Cell : +91 97413 19119

**SIHI KAHI**

KANNADA DAILY MORNING

BAGALKOT

Volume : 06 | Issue : 188 | Thursday 14-12-2023 | E-mail : maruti.b.hosamani76@gmail.com | Page: 4 | Price : Rs. 1/-


## ಬಣವಿಕಲ್ಲು ವಿತರಣಾ ಕೇಂದ್ರದಿಂದ ಸರಬರಾಜು ಆಗುವ ಎಲ್ಲಾ ಗ್ರಾಮಗಳಿಗೆ ವಿದ್ಯುತ್ ವ್ಯತ್ಯಯ

ಬಣವಿಕಲ್ಲು : ವಿಜಯನಗರ ಜಿಲ್ಲೆಯ ಕೂಡ್ಲಿಗಿ ತಾಲೂಕಿನ ಬಡೇಲಡಕು ವಿದ್ಯುತ್ ವಿತರಣಾ ಕೇಂದ್ರದಲ್ಲಿ ದಿನಾಂಕ 14-12-2023 ಗುರುವಾರ ರಂದು 220/66/11ಇಾತ ತುರ್ತು

ನಿರ್ವಹಣಾ ಕಾಮಗಾರಿ ಇರುವುದರಿಂದ 66/11ಏಗಿ ಒಗಖಖ ಬಣವಿಕಲ್ಲು. ವಿದ್ಯುತ್ ವಿತರಣಾ ಕೇಂದ್ರಗಳಿಂದ ಸರಬರಾಜು ಆಗುವ ಎಲ್ಲಾ ಗ್ರಾಮಗಳಿಗೆ ಬೆಳಿಗ್ಗೆ 9. ೦ಒ ಘಂಟೆಯಿಂದ ಸಾಯಂಕಾಲ 5.ಕಒ,



ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ ನಿಯಮಿತ

(ಕರ್ನಾಟಕ ಸರ್ಕಾರದ ಸಂಪೂರ್ಣ ಸ್ವಾಮ್ಯಕ್ಕೆ ಒಳಪಟ್ಟಿದೆ)

-: ಪತ್ರಿಕಾ ಪ್ರಕಟಣೆ :-

ಘಂಟೆಯವರೆಗೆ ವಿದ್ಯುತ್ ವ್ಯತ್ಯಯ ಉಂಟಾಗಲಿದ್ದು ಗ್ರಾಹಕರು ಸಹಕರಿಸಬೇಕೆಂದು, ಪ್ರಕಾಶ್ ಪತ್ತೇನೂರ್ ಸಹಾಯಕ ಕಾರ್ಯ ನಿರ್ವಾಹಕ ಅಭಿಯಂತರರು (ರಿ) ಕಾರ್ಯ ಮತ್ತು ಪಾಲನಾ ಉಪ -ವಿಭಾಗ ಗು. ವಿ. ಸ. ಕಂ. ನಿ. ಕೂಡ್ಲಿಗಿ ಇವರು ಪತ್ರಿಕೆಗೆ ತಿಳಿಸಿದ್ದಾರೆ.

**ಜಿಲ್ಲಾ ವರದಿಗಾರರು:**
**ರಾಘವೇಂದ್ರ. ಬಿ. ಸಾಲುಮನಿ**
**ಕೂಡ್ಲಿಗಿ**

## ಹೂಡೇಂ ಗ್ರಾಮದಲ್ಲಿ ಉಚಿತ ನೇತ್ರ ತಪಾಸಣಾ ಶಿಬಿರ

ಹೂಡೇಂ : ಕೂಡ್ಲಿಗಿ ತಾಲೂಕಿನ ಹೂಡೇಂ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಬುಧವಾರ ಶಂಕರ ಕಣ್ಣಿನ ಆಸ್ಪತ್ರೆ ಶಿವಮೊಗ್ಗ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೊಸೈಟಿ ವಿಜಯನಗರ ಜಿಲ್ಲಾ ಅಂಧತ್ವ ನಿಯಂತ್ರಣ ಕಾರ್ಯಕ್ರಮ, ವಿಜಯನಗರ ತಾಲೂಕಾ ವೈದಧಿಕಾರಿಗಳ ಕಚೇರಿ ಕೂಡ್ಲಿಗಿ ಇವರ ಸಂಯುಕ್ತ ಆಶ್ರಯದಲ್ಲಿ ಉಚಿತ ನೇತ್ರ ತಪಾಸಣೆ ಶಿಬಿರ ಹಮ್ಮಿಕೊಳ್ಳಲಾಯಿತು. ಕಾರ್ಯಕ್ರಮದಲ್ಲಿ ಪಿಎಚ್ ಸಿ ಡಾ ಸಂದೀಪ್ ಮಾತನಾಡಿ ಜೀವನದಲ್ಲಿ ಅತ್ಯಮೂಲ್ಯವಾದ ಕಣ್ಣು ಸಂರಕ್ಷಿತವಾಗಿರ ಬೇಕಾದರೆ ಕಾಲ ಕಾಲಕ್ಕೆ ತಪಾಸಣೆ ಹಾಗೂ ಕಾಳಜಿ ಬಹುಮುಖ್ಯ ಎಂದು ಹೇಳಿದರು. ಈ ಶಿಬಿರದಲ್ಲಿ ಸುಮಾರು 100ಕ್ಕೂ ಹೆಚ್ಚು ಜನ ವಯೋ ವೃದ್ಧರು ಭಾಗಿ ಆಗಿದ್ದು, ಜನರಿಗೆ ಉಚಿತ ಪರೀಕ್ಷೆ ಹಾಗೂ ಕನ್ನಡಕ ವಿತರಿಸಲಾಯಿತು. ಹಾಗೂ



ಕಣ್ಣಿನ ದೋಷ ಇರುವ ಜನರಿಗೆ ಉಚಿತ ಆಪರೇಷನ್ ಮಾಡಲು ಶಿವಮೊಗ್ಗ ಶಂಕರ್ ಆಸ್ಪತ್ರೆಗೆ ರವಾನೆ ನಡೆಸಿದರು ಇದೆ ಸಂದರ್ಭದಲ್ಲಿ ಪಿಎಚ್ ಸಿ ವೈದ್ಯಧಿಕಾರಿಗಳು ಡಾ ಸಂದೀಪ್, ಹಿರಿಯ ನಿರೀಕ್ಷಣಾಧಿಕಾರಿ ಚಂದ್ರಪ್ಪ, ರಮ್ಯಾ, ನೇತ್ರಧಿಕಾರಿಗಳು, ಶುಶ್ರುಷರುಶಕರು, ಭಾಗ್ಯಮ್ಮ, ಮಂಗಳಮ್ಮ ಸೇರಿದಂತೆ ಇಲಾಖೆ ಸಿಬ್ಬಂದಿಗಳು ಮುಖಂಡರು ಇದ್ದರು.

**ಹೋಬಳಿ ವರದಿಗಾರರು:**
**ಕೆ.ಎಸ್. ವೀರೇಶ್. ಕಾನಾ ಹೊಸಹಳ್ಳಿ**

## ಕಾಲುವೆಗಳಿಗೆ ನೀರು ಹರಿಸುವಂತೆ ಒತ್ತಾಯಿಸಿ 10ಕ್ಕೂ ಹೆಚ್ಚು ಗ್ರಾಮಗಳ ರೈತರಿಂದ ಪ್ರತಿಭಟನೆ

ಹುನಗುಂದ : ಮರೋಳ ಏತ ನೀರಾವರಿ ಯೋಜನೆ ಕಾಲುವೆಗಳಿಗೆ ಕೃಷ್ಣಾ ಭಾಗ್ಯ ಜಲ ನಿಗಮ ಏಕಾ ಏಕಿಯಾಗಿ ನೀರು ಹರಿಸೋದ್ದನ್ನು ಸ್ಥಗಿತ ಗೊಳಿಸಿದ ಹಿನ್ನಲೆಯಲ್ಲಿ ಕಾಲವೆಗಳಿಗೆ ನೀರು ಹರಿಸುವಂತೆ ಒತ್ತಾಯಿಸಿ ಮಂಗಳವಾರ ತಾಲೂಕಿನ 10 ಕ್ಕೂ ಹೆಚ್ಚು ಗ್ರಾಮಗಳ ರೈತರು ಬಸವ ಧರ್ಮಪೀಠದ ಚನ್ನಬಸವಾನಂದ ಸ್ವಾಮೀಜಿ ನೇತೃತ್ವದಲ್ಲಿ ಪ್ರತಿಭಟನೆ ನಡೆಸಿ ತಹಶೀಲ್ದಾರ ನಿಂಗಪ್ಪ ಬಿರಾದಾರ ಅವರಿಗೆ ಮನವಿ ಸಲ್ಲಿಸಿದರು.

ಈ ವೇಳೆ ಚನ್ನಬಸವಾನಂದ ಸ್ವಾಮೀಜಿ ಮಾತನಾಡಿ, ರೈತ ದೇಶದ ಬೆನ್ನಲುಬು.ಪ್ರತಿ ವರ್ಷ ಹುನಗುಂದ ತಾಲೂಕಿಗೆ ಕಡಿಮೆ ಪ್ರಮಾಣದ ಮಳೆಯಾಗುತ್ತಿದ್ದು.ಅದರಲ್ಲೂ ಈ ಬಾರಿ ಹಿಂಗಾರು ಮತ್ತು ಮುಂಗಾರು ಕೈಕೊಟ್ಟಿದ್ದು.ಇಲ್ಲಿನ ರೈತರು ಏತ ನೀರಾವರಿ ನೀರನ್ನೇ ನಂಬಿ ಬಿತ್ತನೆ ಮಾಡಿರುತ್ತಾರೆ.ರೈತ ಬೆಳೆದರೆ ಮಾತ್ರ ನಮ್ಮ ಹೊಟ್ಟೆ ಅನ್ನ.ಅವರು ಒಂದು ವರ್ಷ ಸುಮ್ಮೆ ಕುಳಿತರೇ ಮಣ್ಣು ತಿನ್ನೋ ಪರಸ್ಥಿತಿ ಬರುತ್ತೇ ತಾಲ್ಲೂಕಿನ ರೈತರು ಬರಗಾಲ ದಿಂದ ತೀವ್ರ ಸಂಕಷ್ಟದಲ್ಲಿದ್ದಾರೆ.ಅವರ ಹೊಲಗಳಿಗೆ ನೀರು ಹರಿಸಿ ಅದರ ಜೊತೆಗೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಶೀಘ್ರ ರೈತರಿಗೆ ಬರ ಪರಿಹಾರ ನೀಡಬೇಕು ಎಂದು ಒತ್ತಾಯಿಸಿದರು.

ರೈತ ಮುಖಂಡ ಗುರು ಗಾಣಗೇರ ಮಾತನಾಡಿ ರೈತರ ಹೊಲಗಳಿಗೆ ನೀರು ಸ್ಥಗಿತ ಗೊಳಿಸಿ ಕೈಗಾರಿಕೆಗಳಿಗೆ ನೀರು ಪೂರೈಸುತ್ತಿರುವುದು ಯಾವ ನ್ಯಾಯ ? ಕಾಲುವೆಗಳ ವ್ಯಾಪ್ತಿಯುಲ್ಲಿನ ರೈತರು ಸಾಲಶೂಲ ಮಾಡಿ ಲಕ್ಷಾಂತರ ರೂಪಾಯಿ



ಈ ವೇಳೆ ರೈತರಿಗೆ ಮತ್ತು ತಹಶೀಲ್ದಾರ ಮಧ್ಯ ಮಾತಿನ ಚಕಮಕಿ ನಡೆದು ನೀರು ಹರಿಸುವರಗೂ ಪ್ರತಿಭಟನೆಯಿಂದ ಹಿಂದೆ ಸರಿಯುವ ಪ್ರಶ್ನೆನೇ ಇಲ್ಲವೆಂದು ರೈತರು ಪಟ್ಟು ಹಿಡಿದಾಗ ರೈತರ ಆ ಬಿಗಿಪಟ್ಟಿಗೆ ಮಣಿದ ತಾಲೂಕಾಡಳಿತ ಶೀಘ್ರವೇ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳೊಂದಿಗೆ ಮಾತನಾಡಿ ಮೇಲುಸ್ತುವಾರಿ ಸಮಿತಿ ನಿರ್ಣಯದಂತೆ ನೀರನ್ನು ಸ್ಥಗಿತಗೊಳಿಸಲಾಗಿದೆ. ಕುಡಿಯುವ ನೀರು ಹಾಗೂ ಜಾನುವಾರುಗಳಿಗೆ ಮೊದಲ ಆದ್ಯತೆ ನೀಡಲಾಗುತ್ತಿದೆ.ಸದ್ಯ ರೈತರ ಹೊಲಗಳಿಗೆ ನೀರು ಹರಿಸುವ ಸಮಸ್ಯೆ ಕುರಿತು ಜಿಲ್ಲಾಧಿಕಾರಿಗಳೊಂದಿಗೆ ಮಾತನಾಡುವೆ.

**-ನಿಂಗಪ್ಪ ಬಿರಾದಾರ. ತಹಶೀಲ್ದಾರ**

ಖರ್ಚು ಮಾಡಿ ಮೆಣಸಿನಕಾಯಿ ಬೆಳೆದಿದ್ದು, ಬೆಳೆ ಹೂವು ಮತ್ತು ಕಾಯಿ ಕಟ್ಟುವ ಹಂತದಲ್ಲಿದೆ. ಇಂತಹ ಸಮಯದಲ್ಲಿ ನೀರು ಸ್ಥಗಿತ ಗೊಳಿಸದರೆ ರೈತರು ಪರಸ್ಥಿತಿ ಏನು ? ಈ ಬಾರಿ ಮಳೆ ಕೊರತೆಯಿಂದ ಇರುವ ತೇವಾಂಶದಲ್ಲಿ ಗೋಧಿ, ಜೋಳ, ಕಡಲೆ ಸೇರಿದಂತೆ ಇತರೆ ಬೆಳೆಗಳ ಬಿತ್ತನೆ ಮಾಡಿದ್ದಾರೆ. ಈಗ ಬೆಳೆಗಳಿಗೆ ನೀರಿನ ಅವಶ್ಯಕತೆಯಿದ್ದು,ರೈತರ ಹಿತ ದೃಷ್ಟಿಯಿಂದ ವಾರಾಬಂಧಿ ಯೋಜನೆ ಮೂಲಕ ಫೆಬ್ರುವರಿ 20.ರ ವರೆಗೆ ಕಾಲುವೆಗಳ ಮೂಲಕ ನೀರು ಹರಿಸಬೇಕು ಎಂದು ಒತ್ತಾಯಿಸಿದರು.ಎರಡು ದಿನಗಳ ಒಳಗಾಗಿ ನೀರು ಪೂರೈಸದಿದ್ದರೆ ತಾಲ್ಲೂಕಿನ ಎಲ್ಲಾ ರೈತರು ರಸ್ತೆಗಿಳಿದು ಬೃಹತ್ ಪ್ರತಿಭಟನೆ ಮಾಡಲಾಗುವುದು ಎಂದರು.

ಮರೋಳ, ಹಾವರಗಿ, ಹುಲ್ಲಳ್ಳಿ,ಧನ್ನೂರು, ಅಡಿಹಾಳ, ಕಮದತ್ತ, ಎಮ್ಮಟ್ಟಿ, ಇದ್ದಲಗಿ, ಬಿಸನಾಳ, ಬೆಳಗಲ್, ಹಡಗಲಿ, ಕಡಿವಾಲ, ಜಾಲಕಮಲದಿನ್ನಿ, ಪಾಲಥಿ ಸೇರಿದಂತೆ ಇತರೆ ಗ್ರಾಮಗಳ ರೈತರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ಮುತ್ತಪ್ಪ ನಂದವಾಡಗಿ, ಬಸು ಕಡಿವಾಲ, ಚಂದ್ರಗೌಡ ಬಳ್ಳಾರಿ, ಬಸವರಾಜ ದೇಸಾಯಿ, ಮಹಾಂತೇಶ ನಾಡಗೌಡ, ಶೇಖಪ್ಪ ಭಜಂತ್ರಿ, ಸಿದ್ದನಗೌಡ ಗೌಡರ, ಎಂ.ಪಿ.ಹಾವರಗಿ ಇತರರು ಪಾಲ್ಗೊಂಡಿದ್ದರು.

**ತಾಲೂಕ ವರದಿಗಾರರು :**
**ಮಲ್ಲಿಕಾರ್ಜುನ. ಎಂ. ಬಂಡರಗಲ್ಲ**

## ಬಾಡಿಗೆ ತುಂಬದ ಅಂಗಡಿಗಳಿಗೆ ಬೀಗ ಜಡಿದ ಅಧಿಕಾರಿಗಳು

ತೇರದಾಳ : ಉಪ ನೋಂದಣಿ ಕಚೇರಿ ಬಳಿ ಇರುವ ಹಾಗೂ ಮಹಾವೀರ ವೃತ್ತದಲ್ಲಿರುವ ಪುರಸಭೆ ವಾಣಿಜ್ಯ ಮಳಿಗೆಗಳ ಬಾಡಿಗೆದಾರರು ಬಾಡಿಗೆ ತುಂಬದ ಕಾರಣ ಪುರಸಭೆ ಅಧಿಕಾರಿಗಳು ಅಂಗಡಿಗಳಿಗೆ ತೆರಳಿ ಬೀಗ ಹಾಕಿದರು.

ನೋಂದಣಿ ಕಚೇರಿ ಬಳಿ ಇರುವ 11 ಮಳಿಗೆಗಳ ಪೈಕಿ 4 ಅಂಗಡಿಯ ಬಾಡಿಗೆದಾರರು ಬಾಡಿಗೆ ಪಾವತಿಸಿಲ್ಲ. ಅದರಂತೆ ಮಹಾವೀರ ವೃತ್ತದಲ್ಲಿನ 8 ಮಳಿಗೆಗಳ ಪೈಕಿ ಒಬ್ಬರು ಪಾವತಿಸಿಲ್ಲ. ಬಾಡಿಗೆ ಪಾವತಿಸುವ ಬಗ್ಗೆ ಮೌಖಿಕವಾಗಿ ಸಾಕಷ್ಟು ಬಾರಿ ಹೇಳಿದರು ಬಾಡಿಗೆಯನ್ನು ತುಂಬದ ಕಾರಣ ಅಂಗಡಿಗಳಿಗೆ ಬೀಗ ಹಾಕಲಾಗಿದೆ ಎಂದು ಮುಖ್ಯಾಧಿಕಾರಿ ಆನಂದ ಕೆಸರಗೊಪ್ಪ ತಿಳಿಸಿದರು. ಸಾರ್ವಜನಿಕರು ಆಸ್ತಿ ತೆರಿಗೆ,



ನೀರಿನ ಕರ ಕೂಡಲೇ ಪಾವತಿಸಬೇಕು. ಹಾಗೂ ಅಂಗಡಿಕಾರರು ಪರವಾಣಗಿಯನ್ನು ನವೀಕರಣ ಮಾಡಿಕೊಳ್ಳಬೇಕು. ಪುರಸಭೆಗೆ ಆದಾಯ ಹೆಚ್ಚಿದಾಗ ಮಾತ್ರ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಸಾಧ್ಯ ಆಗುತ್ತದೆ. ಆದ್ದರಿಂದ ಸಾರ್ವಜನಿಕರು ಸಹಕಾರ ನೀಡಬೇಕೆಂದು ಮನವಿ ಮಾಡಿದ್ದಾರೆ. ಕಚೇರಿ ವ್ಯವಸ್ಥಾಪಕ ಮಲ್ಲಿಕಾರ್ಜುನ ಬಿರಾದಾರಪಾಟೀಲ, ಕಂದಾಯ ಅಧಿಕಾರಿ ಎಫ್.ಬಿ. ಗಿಡ್ಡಿ ಇದ್ದರು.

## ಜಿಂದಾಲ್ ಕಂಪೆನಿಗೆ ನೀರು ಪೂರೈಕೆ ರೈತರ ವಿರೋಧಿ: ಪಂಪಹೌಸಗೆ ರೈತರ ಮುತ್ತಿಗೆ

ಹುನಗುಂದ : ಕಾಲುವೆಗಳಿಗೆ ನೀರು ಹರಿಸದೇ ಜಿಂದಾಲ್ ಕಂಪನಿಗೆ ನೀರು ಹರಿಸಲಾಗುತ್ತಿದೆ.ಜಿಂದಾಲಗೆ ಹರಿಸುತ್ತಿರುವ ನೀರನ್ನು ಕೂಡಲೇ ನಿಲ್ಲಿಸಬೇಕು ಎಂದು ಮಂಗಳವಾರ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಸದಸ್ಯರು ಪಂಪ್ ಹೌಸ್ಗೆ ಮುತ್ತಿಗೆ ಹಾಕಿ ಪ್ರತಿಭಟಿಸಿದರು.

ತಾಲ್ಲೂಕಿನ ಮರೋಳ ಗ್ರಾಮದ ಹತ್ತಿರವಿರುವ ಜಿಂದಾಲ್ ಕಂಪನಿಗೆ ನೀರು ಪೂರೈಸುವ ಪಂಪ್ ಹೌಸ್



ಗೇಟಿಗೆ ಹಾಕಲಾಗಿದ್ದ ಬೀಗ ಒಡೆದು ರೈತರು ಒಳನುಗ್ಗಿದರು.

ಒಳಗೆ ಮುನ್ನುಗ್ಗುತ್ತಿದ್ದ ರೈತರನ್ನು ಪಂಪಹೌಸ್ ಭದ್ರತಾ ಸಿಬ್ಬಂದಿ ಪ್ರತಿರೋಧ ವ್ಯಕ್ತಪಡಿಸಿದರು.

ಇದರಿಂದ ಮಾತಿನ ಚಕಮಕಿ ನಡೆಯಿತು. ಗೇಟ್ ಮುರಿದು ಒಳನುಗ್ಗಿ,ನೀರು ಪೂರೈಕೆಯನ್ನು ಸ್ಥಗಿತ ಗೊಳಿಸಬೇಕು ಎಂದು ಆಗ್ರಹಿಸಿದರು.

ಅಲ್ಲಿನ ಸಿಬ್ಬಂದಿ ಸ್ಥಗಿತ ಗೊಳಿಸಿದರು.

ಬೆಳೆಗಳಿಗೆ ನೀರಿಲ್ಲದೇ ಒಣಗುತ್ತಿವೆ. ನೀರು ಬಿಡುವಂತೆ ಮನವಿ ಮಾಡಿದರೂ ಕಾಲುವೆಗಳಿಗೆ ನೀರು ಹರಿಸುವುದನ್ನು ನಿಲ್ಲಿಸಿದ್ದಾರೆ. ಆದರೆ, ಜಿಂದಾಲ್ಗೆ ನೀರು ಸರಬರಾಜು ಮಾಡಲಾಗುತ್ತಿದೆ ಎಂದು ರೈತರು ಆಕ್ರೋಶ ವ್ಯಕ್ತಪಡಿಸಿದರು.

ರೈತ ಮುಖಂಡರಾದ ಗುರು ಗಾಣಿಗೇರ, ರಸೂಲ್ಸಾಬ್ ತಹಶೀಲ್ದಾರ್, ಬಸನಗೌಡ ಪೈಲ್ ಸೇರಿದಂತೆ ವಿವಿಧ ಗ್ರಾಮಗಳ 50.ಕ್ಕೂ ಹೆಚ್ಚು ರೈತರು ಪಾಲ್ಗೊಂಡಿದ್ದರು.

## ಕುಸಿಯುವ ಹಂತದಲ್ಲಿ ನಗರಸಭೆ ಮಳಿಗೆಯ ಮೇಲ್ಛಾವಣಿ ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಬಲಿಯಾಗದಿರಲಿ ಬಡಜೀವಗಳು

ರಬಕವಿ-ಬನಹಟ್ಟಿ : ನಗರಸಭೆಯ ಅಧೀನದಲ್ಲಿ ಬನಹಟ್ಟಿಯ ಗಾಂಧಿ ವೃತ್ತದ ಬಳಿಯ ಸುಮಾರು ಹನ್ನೆರಡು ಖಾಸಗಿ ಮಳಿಗೆಗಳಲ್ಲಿ ಅಲ್ಲಲ್ಲಿ ಮೇಲ್ಛಾವಣಿಗಳು ಈಗಲೋ ಆಗಲೋ ಕುಸಿಯುವ ಹಂತದಲ್ಲಿದ್ದು , ಅಧಿಕಾರಿಗಳ ನಿರ್ಲಕ್ಷ್ಯದಿಂದ ವ್ಯಾಪಾರಿಗಳು ಹಾಗೇಯೇ ಕೋಣೆಯಲ್ಲಿ ವ್ಯಾಪಾರ ನಡೆಸುತ್ತಿದ್ದು, ದಿನದಿಂದ ದಿನಕ್ಕೆ ಮೇಲ್ಛಾವಣಿಯ ಸಿಮೆಂಟ್ ಉದುರುತ್ತಿದ್ದರೂ ನಿರ್ಲಕ್ಷ್ಯದಿಂದ ಕಾಲಹರಣವಾಗುವಲ್ಲಿ ಕಾರಣವಾಗಿದೆ.

ಇದೊಂದು ಪ್ರಮುಖ ಮಾರುಕಟ್ಟೆಯಾಗಿರುವ ಕಾರಣ, ಸಾವಿರಾರು ಜನರು ದಿನಂ ಪ್ರತಿ ಈ ಪ್ರದೇಶದಲ್ಲಿ ಓಡಾಟ ನಡೆಸುತ್ತಾರೆ. ಇದೇ ಅಂಗಡಿಗಳ ಮುಂಭಾಗದಲ್ಲಿ ಸಂತೆಯೂ ನಡೆಯುತ್ತದೆ. ಬಾಡಿಗೆ ಪಡೆದ ವ್ಯಕ್ತಿಗಳು ಬೇರೆ ದಾರಿಯಿಲ್ಲದೆ ಪ್ರತಿ ನಿತ್ಯವೂ ಇದೇ ಕೋಣೆಗಳಲ್ಲಿ ಜೀವ ಮುಷ್ಠಿಯಲ್ಲಿ ಹಿಡಿದುಕೊಂಡು ಆತಂಕದಲ್ಲಿಯೇ ವ್ಯಾಪಾರ ನಡೆಸುವ ಪರಿಸ್ಥಿತಿ ನಿರ್ಮಾಣವಾಗಿದೆ.

ನಿರ್ವಹಣೆಯಿಲ್ಲ: ಕೇವಲ ಬಾಡಿಗೆ



**'ಈ ಬಗ್ಗೆ ಮಾಹಿತಿಯಿದ್ದು , ಶೀಘ್ರವೇ ಟೆಂಡರ್ ಕರೆದು ಎಲ್ಲಾ ಮಳಿಗೆಗಳ ದುರಸ್ಥಿ ಕಾರ್ಯ ನಡೆಸಲಾಗುವದು.'**
**-ಜಗದೀಶ ಈಟಿ,**
**ಪೌರಾಯುಕ್ತರು, ರಬಕವಿ-ಬನಹಟ್ಟಿ.**

ಪಡೆಯುತ್ತಿರುವ ನಗರಸಭೆಯು ಇದಕ್ಕೆ ಪೂರಕವಾಗಿ ಮಳಿಗೆಗಳನ್ನು ನಿರ್ವಹಣೆ ಮಾಡುವಲ್ಲಿ ಸಂಪೂರ್ಣ ವಿಫಲಗೊಂಡಿರುವದೇ ಮೇಲ್ಛಾವಣಿ ಬಿರುಕಿಗೆ ಕಾರಣವಾಗಿದ್ದು, ಇಲ್ಲಿನ ದುಃಸ್ಥಿತಿಗೆ ಸಾರ್ವಜನಿಕರು ನಗರಸಭೆಗೆ ಛೀಮಾರಿ ಹಾಕುತ್ತಿದ್ದಾರೆ.

ಮೇಲ್ಛಾವಣಿಗೆ ಹೆದರಿ ಕೆಲ ವ್ಯಾಪಾರಿಗಳು ಮಳಿಗೆ ಮುಂಭಾಗದಲ್ಲಿ ವ್ಯಾಪಾರ ಮಾಡುವ ಪರಿಸ್ಥಿತಿ ಎದುರಾಗಿದ್ದರೂ ನಗರಸಭೆ ನಮಗೇನೂ ಸಂಬಂಧವಿಲ್ಲವೆಂಬಂತೆ ಕೈಕಟ್ಟಿ ಕುಳಿತಿರುವುದು ವಿಪರ್ಯಾಸ.

## ಹೂವನೂರ ಗ್ರಾಮದಲ್ಲಿ ಸ್ವಾಭಿಮಾನಿ ಶರಣ ಮೇಳ

ಹುನಗುಂದ : ಜ.13 ರಿಂದ 15.ರ ವರೆಗೆ ಮೂರು ದಿನಗಳ ಕಾಲ 2.ನೆಯ ಸ್ವಾಭಿಮಾನಿ ಶರಣ ಮೇಳವನ್ನು ತಾಲೂಕಿನ ಹೂವನೂರು ಗ್ರಾಮದ ಹೊರ ವಲಯದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಸ್ವಾಭಿಮಾನಿ ಶರಣ ಮೇಳದ ಉತ್ಸವ ಸಮಿತಿ ಅಧ್ಯಕ್ಷ ಚನ್ನಬಸವಾನಂದ ಸ್ವಾಮೀಜಿ ಹೇಳಿದರು.

ಮಂಗಳವಾರ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಸ್ವಾಭಿಮಾನಿ ಶರಣ ಮೇಳದ ಬಿತ್ತಿಪತ್ರ ಬಿಡುಗಡೆ ಮಾಡಿ ಮಾತನಾಡಿದ ಅವರು ಜನೇವರಿ 13. ರಂದು ಸ್ವಾಭಿಮಾನಿ ಶರಣ ಮೇಳದ ಉದ್ಘಾಟನೆ ಮತ್ತು ಧರ್ಮ ಚಿಂತನೆ ಗೋಷ್ಠಿ,ಯುವ ಗೋಷ್ಠಿ 14. ರಂದು ಸಮುದಾಯ ಪ್ರಾರ್ಥನೆ,ಸಾಮೂಹಿಕ ಇಷ್ಟಲಿಂಗ ಪೂಜೆ,ಮಹಿಳಾ ಗೋಷ್ಠಿ ಹಾಗೂ ಕೊನೆಯ ದಿನ 15. ರಂದು ಬಸವ ಯೋಗಿ ಸಿದ್ದರಾಮೇಶ್ವರರ ಜಯಂತಿ ಮತ್ತು ಪಥ ಸಂಚಲನ ಜರುಗಲಿದೆ ಎಂದು ತಿಳಿಸಿದರು.

ಧರ್ಮಗುರು ಬಸವಣ್ಣನವರ ಸಾನ್ನಿಧ್ಯದಲ್ಲಿ ಶರಣ ಮೇಳ ನಡೆಯಲಿದ್ದು, ಚನ್ನಬಸವಾನಂದ




ಸ್ವಾಮೀಜಿ ನೇತೃತ್ವದಲ್ಲಿ ಜರುಗಲಿರುವ ಶರಣ ಮೇಳದ ಸಮ್ಮುಖವನ್ನು ಬೀದರ್ ಬಸವ ಮಂಟಪದ ಮಾತೆ ಸತ್ಯಾದೇವಿ ಹಾಗೂ ಬೆಳಗಾವಿ ಪ್ರಭುಲಿಂಗ ಸ್ವಾಮೀಜಿ ಅವರು ವಹಿಸಿಕೊಳ್ಳಲಿದ್ದು, ಅಕ್ಕ ನಾಗಲಾಂಬಿಕೆ, ಚಿಕ್ಕಮಗಳೂರಿನ ವಿಶ್ವಧರ್ಮ ಪೀಠದ ಜಯ ಬಸವಾನಂದ ಸ್ವಾಮೀಜಿ, ಪಂಚಮಸಾಲಿ ಪೀಠದ ಬಸವಜಯ ಮೃತ್ಯುಂಜಯ ಸ್ವಾಮೀಜಿ ಸೇರಿದಂತೆ ನಾಡಿನ ಹಲವು ಮಠಾಧೀಶರು ಪಾಲ್ಗೊಳ್ಳುವರು ಎಂದರು.

ಮಾತಾಜೀಯವರ ಸಂಕಲ್ಪ ಸಾಕಾರ ಗೊಳಿಸಲು ಬಸವ ಧರ್ಮ ಸಂಸ್ಥಾಪನಾ ದಿನದಂದು ಸ್ವಾಭಿಮಾನಿ ಶರಣ ಮೇಳ ಆಯೋಜಿಸಲು ತೀರ್ಮಾನಿಸಲಾಗಿದ್ದು,ಸ್ವಾಭಿಮಾನಿಗಳು,ತತ್ವನಿಷ್ಠರು, ಹಾಗೂ ಲಿಂಗಾನಂದ ಅಪ್ಪಾಜಿ ಹಾಗೂ ಬಸವಾತ್ಮಾಜೆಯು ಕರುಳಿನ ಕುಡಿಗಳಾದ ತಾವುಗಳು ತನು ಮನದಿಂದ ಸಹಕರಿಸಬೇಕು ಎಂದು ಮನವಿ ಮಾಡಿದರು.

ಇದೇ ವೇಳೆ ಶರಣ ಮೇಳವನ್ನು ಹೂವನೂರು ಗ್ರಾಮದ ಮುದಕಪ್ಪ ಚಲವಾದಿ ಅವರ ಹೊಲದಲ್ಲಿ ಹಮ್ಮಿಕೊಳ್ಳಲಾಗಿದ್ದು, ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ತಹಶೀಲ್ದಾರ್ ಹಾಗೂ ಇನ್ನಿತರ ಇಲಾಖೆಗಳ ಅನುಮತಿ ಪಡೆಯಲಾಗಿದೆ ಎಂದರು.ರಾಷ್ಟ್ರೀಯ ಬಸವ ದಳದ ಬೆಳಗಾವಿ ಜಿಲ್ಲಾ ಘಟಕದ ಅಧ್ಯಕ್ಷ ಅಶೋಕ ಬೆಂಡಿಗೇರಿ ಮಾತನಾಡಿದರು.

**ತಾಲೂಕ ವರದಿಗಾರರು:**
**ಮಲ್ಲಿಕಾರ್ಜುನ.ಎಂ.ಬಂಡರಗಲ್ಲ**

# ಉತ್ತಮ ಆಡಳಿತಕ್ಕೆ ಸರ್ವರ ಸಹಕಾರ ಅವಶ್ಯ




ಬಾಗಲಕೋಟೆ : ಸುಗಮ ಹಾಗೂ ಉತ್ತಮ ಆಡಳಿತಕ್ಕೆ ಮಹಾವಿದ್ಯಾಲಯದವಲ್ಲ ಸಿಬ್ಬಂದಿ ಅವಶ್ಯಕ ಸಹಾಯ–ಸಹಕಾರ ನೀಡಬೇಕುಎಂದು ಕಾಲೇಜು ಆಡಳಿತ ಮಂಡಳಿಯ(ಸಿಜಿಸಿ) ಕಾರ್ಯಾಧ್ಯಕ್ಷ ಡಾ.ಪಿ.ಆರ್.ಜೋಶಿ ಹೇಳಿದರು.

ನಗರದ ವಿದ್ಯಾ ಪ್ರಸಾರಕ ಮಂಡಳದ ಎಸ್.ಆರ್. ನರಸಾಪೂರ ಕಲಾ ಹಾಗೂ ಎಂ.ಬಿ. ಶಿರೂರ ವಾಣಿಜ್ಯ ಮಹಾವಿದ್ಯಾಲಯದಲ್ಲಿ ನಡೆದ ಪ್ರಥಮ ಸಿಜಿಸಿ ಸಭೆಯಲ್ಲಿಅವರು ಮಾತನಾಡಿದರು.

ಪ್ರಾಮಾಣಿಕ ಪ್ರಯತ್ನವಿದ್ದಲ್ಲಿಯಶಸ್ಸು ಸಾಧ್ಯ ಎಂಬ ಅಂಶವನ್ನು ಗಮನದಲ್ಲಿಟ್ಟುಕೊಂಡು ಕಾರ್ಯ ನಿರ್ವಹಿಸಬೇಕು. ಸಮಯಪಾಲನೆ ಹಾಗೂ ಶಿಸ್ತನ್ನು ಅಳವಡಿಸಿಕೊಂಡು ಉಳಿದವರಿಗೆ ಮಾದರಿಯಾಗಬೇಕು. 'ನ್ಯಾಕ್'ಗೆ ಸಂಬಂಧಿಸಿದಂತೆ ಅವಶ್ಯಕ ಸಿದ್ಧತೆಗಳನ್ನು ಮಾಡಿಕೊಳ್ಳುವಂತೆ ಸಲಹೆ ನೀಡಿದರು.

ಸದಸ್ಯ ಡಾ. ಸಂದೀಪ ಹುಯಿಲಗೋಳ ಮಾತನಾಡಿ ವಿದ್ಯಾರ್ಥಿಗಳು ಕಂಪ್ಯೂಟರ (ಟ್ಯಾಲಿ) ಕೌಶಲಗಳನ್ನು ಬೆಳೆಸಿಕೊಳ್ಳಲು ಅವರಿಗೆ ಸೂಕ್ತ ತರಬೇತಿ ನೀಡಬೇಕು. ಪದವಿಯ ಮೊದಲ ವರ್ಷದಿಂದಲೇಅವರಿಗೆಸ್ಪರ್ಧಾತ್ಮಕ ಪರೀಕ್ಷೆಗಳ ತಯಾರಿಯ ಬಗ್ಗೆ ಅರಿವು ಮೂಡಿಸುವುದರ ಮೂಲಕ ವಿದ್ಯಾರ್ಥಿಗಳನ್ನು ಆಕರ್ಷಿಸಬಹುದು. ಕಲಿಕೆಯಜೊತೆಗೆ ಬಿಡುವಿನ ವೇಳೆಯಲ್ಲಿ ಗಳಿಕೆಯನ್ನು ಮಾಡಬಯಸುವ ವಿದ್ಯಾರ್ಥಿಗಳಿಗೆ ತಾವುಅವಶ್ಯಕ ಸಹಾಯ ಮಾಡುವುದಾಗಿ ತಿಳಿಸಿದರು.

ಪ್ರಾಚಾರ್ಯ ಶ್ರೀನಿವಾಸ ನರಗುಂದ ಮಾತನಾಡಿಪಠ್ಯ ಹಾಗೂ ಪಠ್ಯಪೂರಕ ಚಟುವಟಿಕೆಗಳನ್ನು ನಿಭಾಯಿಸುವುದರಜೊತೆಗೆ ಬರುವ ದಿನಗಳಲ್ಲಿ 'ನ್ಯಾಕ್' ತಯಾರಿ ಮಾಡಿಕೊಳ್ಳಬೇಕಿದೆ. ಕಂಪ್ಯೂಟರ ಸಹಿತಉತ್ತಮ ಶೈಕ್ಷಣಿಕ ಸೌಲಭ್ಯಗಳನ್ನು ಒದಗಿಸುವುದರ ಮೂಲಕ ವಿದ್ಯಾರ್ಥಿಗಳ ಸಂಖ್ಯೆಯನ್ನು ಹೆಚ್ಚಿಸಬಹುದಾಗಿದೆ. ಈ ದಿಶೆಯಲ್ಲಿಎಲ್ಲರ ಸಹಕಾರಅವಶ್ಯಎಂದರು. ಡಾ. ಎಚ್.ಎಸ್. ಗಿಡಗಂಟಿ, ಡಾ.ವಿ.ಎಸ್. ಮಠ ಹಾಗೂ ಆರ್.ಎಸ್. ಚವ್ಹಾಣತಮ್ಮ ಅನಿಸಿಕೆ ತಿಳಿಸಿದರು. ಕೀರ್ತಿದಾಸರ ಪ್ರಾರ್ಥಿಸಿದರು. ಶ್ರೀಮತಿ ಎಸ್.ಪಿ. ದೇಶಪಾಂಡೆ ನಿರೂಪಿಸಿದರು. ಡಿ.ಎಚ್.ಬಿರಾದಾರ ವಂದಿಸಿದರು. ಸಿಜಿಸಿ ಸದಸ್ಯರಾದ ಆರ್.ಎಸ್. ಕಂದಕೂರ, ಪವನ ಕಾಸಟ್ ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

# ರಾಜ್ಯಮಟ್ಟದ ಸಾಂಸ್ಕೃತಿಕ ಚಟುವಟಿಕೆಗಳ ಸ್ಪರ್ಧೆಯಲ್ಲಿ ಅದ್ಭುತ ಸಾಧನೆ ಗೈದ ಬಿಪ್ಸ್ ಶಾಲಾ ಮಕ್ಕಳು



ವಿದ್ಯಾಗಿರಿ : ರಾಜ್ಯಮಟ್ಟದಲ್ಲಿ ತನ್ನದೇ ಆದ ಜನಪ್ರಿಯತೆಯನ್ನು ಗಳಿಸಿರುವ ಬಾಗಲಕೋಟೆ ನಗರದ ಪ್ರತಿಷ್ಠಿತ ಬಸವೇಶ್ವರ ವೀರಶೈವ ವಿದ್ಯಾವರ್ಧಕ ಸಂಘವು ಇದೇ ಡಿಸೆಂಬರ್ ತಿಂಗಳ 2 ಮತ್ತು 3 ರಂದು ರಾಜ್ಯಮಟ್ಟದ ಸಾಂಸ್ಕೃತಿಕ ಚಟುವಟಿಕೆಗಳ 'ಬಿವಿವಿಎಸ್. ಸಿಂಚನ 2023 ' ಹೆಸರಿನ ಸ್ಪರ್ಧಾ ಕಾರ್ಯಕ್ರಮವನ್ನು ಬೆಂಗಳೂರಿನ ಬಿಡದಿಯಲ್ಲಿ ಅತ್ಯಂತ ವ್ಯವಸ್ಥಿತವಾದ ರೀತಿಯಲ್ಲಿ ನಡೆಸಿಕೊಟ್ಟಿತು. ಸಂಘದಿಂದ ರಾಜ್ಯಮಟ್ಟದಲ್ಲಿ ಇಂತಹ ಅಪರೂಪವಾದ ಕಾರ್ಯಕ್ರಮವನ್ನು ಇದೇ ಮೊದಲ ಬಾರಿಗೆ ಬೆಂಗಳೂರು ಭಾಗದಲ್ಲಿ ಹಮ್ಮಿಕೊಳ್ಳಲಾಗಿತ್ತು. ಅಲ್ಲಿ ನಡೆದ ಅನೇಕ ಸ್ಪರ್ಧೆಗಳಲ್ಲಿ ಭಾಗವಹಿಸಿದ್ದ ನಗರದ ಪ್ರತಿಷ್ಠಿತ ಬಸವೇಶ್ವರ ಸಿಬಿಎಸ್ಇ (ಬಿಪ್ಸ್)ಶಾಲೆಯ ಅನೇಕ ವಿದ್ಯಾರ್ಥಿಗಳು ಭಾಗವಹಿಸಿ ರಾಜ್ಯಮಟ್ಟದ ಒಟ್ಟಾರೆ ಪ್ರದರ್ಶನದಲ್ಲಿ ಮೊದಲ ರನ್ನರ್ ಅಪ್ ಸ್ಥಾನಗಳಿಸುವ ಮೂಲಕ ಅಭೂತಪೂರ್ವ ಸಾಧನೆ ಮಾಡಿದ್ದಾರೆ.

ವಿಜ್ಞಾನವಸ್ತುಮಾದರಿಯ ತಯಾರಿಕೆಯಲ್ಲಿ 10 ನೇ ವರ್ಗದ ಕು. ಪ್ರಶಾಂತ ಕೆ. ಕು. ಮದನ್ ಎಸ್. ಹಾಗೂ ಕು. ಸುವ್ಯಕ್ತ ಇವರು ಪ್ರಥಮ ಸ್ಥಾನವನ್ನು, ಕಸದಿಂದ ರಸ ಮಾಡುವ ಸ್ಪರ್ಧೆಯಲ್ಲಿ ಕು. ಪ್ರಥಮ ಹಾಗೂ ಕು. ಶುಭನ್ ಪ್ರಥಮ ಸ್ಥಾನವನ್ನು, ವಿಜ್ಞಾನ ರಸಪ್ರಶ್ನೆ ಸ್ಪರ್ಧೆಯಲ್ಲಿ ಕು. ನಿಖಿಲ್ ಎಚ್. ಹಾಗೂ ಶ್ರೇಯಸ್ ಪದರಾ, ದ್ವಿತೀಯ ಸ್ಥಾನವನ್ನು, ಬೆಂಕಿರಹಿತ ಅಡುಗೆ ತಯಾರಿಕಾ ಸ್ಪರ್ಧೆಯಲ್ಲಿ ಕು. ಅನನ್ಯಾ ಕೆ, ಕು.ಸ್ಫೂರ್ತಿ ಕೆ. ಪ್ರಥಮ ಸ್ಥಾನವನ್ನು, ಕು. ಗೌತಮ್ ಕೆ. ಫೋಟೋಗ್ರಾಫಿ ಸ್ಪರ್ಧೆಯಲ್ಲಿ ದ್ವಿತೀಯ ಸ್ಥಾನವನ್ನು, ಚರ್ಚಾಸ್ಪರ್ಧೆಯಲ್ಲಿ ಕು. ಸ್ತುತಿ ಗುರಾಣಿ ದ್ವಿತೀಯ ಸ್ಥಾನವನ್ನು ಪ್ರಬಂಧ ಬರಹ ಸ್ಪರ್ಧೆಯಲ್ಲಿ ಕು. ಜ್ಯೋತ್ಸ್ನಾ ಎಮ್. ದ್ವಿತೀಯ ಸ್ಥಾನವನ್ನು ಗಳಿಸಿಕೊಂಡರೆ, ಜಾನಪದ ನೃತ್ಯ ಸ್ಪರ್ಧೆಯಲ್ಲಿ 9 ನೇ ವರ್ಗದ ಕು. ಶ್ರಾವಣಿ, ಕು.ತ್ರೀಶಾ, ಕು. ಅನುಶ್ರೀ. ಕು. ಮಾನಸಿ, ಕು. ಶ್ರೇಯಾ ಎಸ್, ಕು. ರಚನಾ ಎಮ್, ಕು. ಧೃತಿ ಎಸ್, ಮತ್ತು ಕು. ಚಂದ್ರಿಕಾ ಆರ್. ಅವರನ್ನೊಳಗೊಂಡ ತಂಡವು ಪ್ರದರ್ಶಿಸಿದ ಅತ್ಯುತ್ತಮ ನೃತ್ಯ ಪ್ರದರ್ಶನಕ್ಕೆ ಪ್ರಥಮ ಸ್ಥಾನ ಲಭಿಸಿದೆ.ಬಾಗಲಕೋಟೆಯ ಬಿಪ್ಸ್ ವಿದ್ಯಾರ್ಥಿಗಳು ಒಟ್ಟಾರೆ ನೀಡಿದ ಉತ್ತಮ ಪ್ರದರ್ಶನದ ಪರಿಣಾಮವಾಗಿ ಪ್ರಥಮ ರನ್ನರ್ ಅಪ್ ಸ್ಥಾನವನ್ನು ಪಡೆದಿದ್ದರಿಂದ ಅತ್ಯಾಕರ್ಷಕ ಪಾರಿತೋಷಕ ಹಾಗೂ ನಾಲ್ಕು ಸಾವಿರ ಬಹುಮಾನವನ್ನು ಪಡೆದುಕೊಂಡಿದ್ದಾರೆ. ಶಾಲೆಯ ವಿದ್ಯಾರ್ಥಿಗಳ ಸಾಧನೆಗೆ ಬವಿವಿ ಸಂಘದ ಕಾರ್ಯಾಧ್ಯಕ್ಷರಾದ ಡಾ ವೀರಣ್ಣ ಸಿ ಚರಂತಿಮಠ, ಶಾಲಾ ಕಾಲೇಜು ಆಡಳಿತ ಮಂಡಳಿಯ ಕಾರ್ಯಾಧ್ಯಕ್ಷರಾದ ಶ್ರೀ ಮಹಾಂತೇಶ ಶೆಟ್ಟರ್, ಗೌರವ ಕಾರ್ಯದರ್ಶಿಗಳಾದ ಶ್ರೀ ಮಹೇಶ ಅಥಣಿ ಶಾಲೆಯ ಪ್ರಾಚಾರ್ಯರಾದ ಶ್ರೀ ಸಿ.ಬಿ. ಸುರೇಶ ಹೆಗ್ಡೆ ಉಪಪ್ರಾಚಾರ್ಯರಾದ ಶ್ರೀಮತಿ ಮಂಗಳಗೌರಿ ಹೆಗ್ಡೆ ಹಾಗೂ ಶಾಲಾ ಸಿಬ್ಬಂದಿ ವರ್ಗ ಹೃತ್ಪೂರ್ವಕವಾದ ಅಭಿನಂದನೆಯನ್ನು ಸಲ್ಲಿಸಿದ್ದಾರೆ.

# ಲಾಭದಾಯಕ ಕೃಷಿಗೆ ಮಣ್ಣಿನ ಸಂರಕ್ಷಣೆ ಅಗತ್ಯ: ಎಸ್.ಎಂ.ಬಿರಾದರ




ಮಹಾಲಿಂಗಪುರ: ರೈತರು ಕೃಷಿಯಲ್ಲಿ ಹೆಚ್ಚಿನ ಲಾಭವನ್ನು ಕಂಡುಕೊಳ್ಳಬೇಕಾದರೆ ತಮ್ಮ ಜಮೀನುಗಳ ಮಣ್ಣಿನ ಸಂರಕ್ಷಣೆ ಮಾಡುವದು ಬಹಳ ಅಗತ್ಯವಿದೆ ಎಂದು ತೇರದಾಳ ಕೃಷಿ ಅಧಿಕಾರಿ ಎಸ್.ಎಂ. ಬಿರಾದರ ಹೇಳಿದರು.

ಸಮೀಪದ ಢವಳೇಶ್ವರ ಗ್ರಾಮದ ಕಾಂತೇಶ ಪಟ್ಟಣಶೆಟ್ಟಿ ಅವರ ಹೊಲದಲ್ಲಿ ಕೃಷಿ ಇಲಾಖೆಯ ಆಹಾರ ಮತ್ತು ಪೌಷ್ಠಿಕ ಭದ್ರತಾ ಯೋಜನಯಡಿ ಆಯೋಜಿಸಿದ್ದ ಮೆಕ್ಕೆಜೋಳ ಕ್ಷೇತ್ರೋತ್ಸವ ಮತ್ತು ವಿಶ್ವಮಣ್ಣು ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು ರೈತರು ಹೆಚ್ಚಾಗಿ ಕೊಟ್ಟಿಗೆ ಗೊಬ್ಬರ ಬಳಸಿ, ರಾಸಾಯನಿಕ ಗೊಬ್ಬರ ಬಳಕೆಯನ್ನು ಕಡಿಮೆ ಮಾಡುವದು ಹಾಗೂ ಕಾಲಕ್ಕೆ ತಕ್ಕಂತೆ ವಿಭಿನ್ನ ಬೆಳೆಗಳನ್ನು ಮಾಡುವ ಮೂಲಕ ಮಣ್ಣಿನ ಫಲವತ್ತತೆಯನ್ನು ಕಾಯ್ದುಕೊಳ್ಳಬೇಕು ಎಂದರು.

ಮಹಾಲಿಂಗಪುರ ಕೃಷಿ ಅಧಿಕಾರಿ ಟಿ.ಎಂ. ಡಾಂಗೆ ಅವರು ಮೆಕ್ಕೆಜೋಳ ಕ್ಷೇತ್ರೋತ್ಸವ ಕುರಿತು ರೈತರಿಗೆ ಮಾಹಿತಿ ನೀಡಿದರು.

ವಿಶ್ವ ಮಣ್ಣು ದಿನಾಚರಣೆಯ ನಿಮಿತ್ಯ ಪ್ರಾತ್ಯಕ್ಷಿಕೆಯ ಮೂಲಕ ಮಣ್ಣಿನ ವಿವಿಧ ಮಾದರಿ ಸಂಗ್ರಹಣೆ ಕುರಿತು ರೈತರಿಗೆ ವಿಷಯ ತಜ್ಞರಾದ ಬಾಹುಬಲಿ ಕೊಕಟನೂರ ರೈತರಿಗೆ ಮಾಹಿತಿ ನೀಡಿದರು.

ಆತ್ಮ ಯೋಜನೆಯ ತಾಂತ್ರಿಕ ಅಧಿಕಾರಿ ಕೆ.ಎ.ಜಮುಖಂಡಿ, ಪ್ರವೀಣ ಕೊಪ್ಪದ, ಶ್ರೇಯಾಂಕ ಪಾಟೀಲ ಮತ್ತು ಪ್ರಗತಿಪರ ಪೂರ್ಣೇಶ ಮಠಪತಿ, ಮಹಾಂತೇಶ ಪಟ್ಟಣಶೆಟ್ಟಿ, ಕೃಷಿ ಇಲಾಖೆಯ ಸಿಬ್ಬಂದಿ ಬೀರಪ್ಪ ಸಂಶಿ ಸೇರಿದಂತೆ ಹಲವರು ಇದ್ದರು.

# ಮೂಡಲಗಿ: ಬ್ಲೂ ಆಯ್ಕೆ



ಮೂಡಲಗಿ : ಮೂಡಲಗಿ ಶಿಕ್ಷಣ ಸಂಸ್ಥೆಯ ಕಲಾ ಹಾಗೂ ವಾಣಿಜ್ಯ ಮಹಾವಿದ್ಯಾಲಯದ ನವೀನ ರಾಜು ಪೂಜೇರಿ ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಚೆಸ್ ಕ್ರೀಡೆಯಲ್ಲಿ ಬ್ಲೂ ಆಗಿ ಆಯ್ಕೆಯಾಗಿದ್ದಾನೆ, ಇತ್ತೀಚೆಗೆ ರಾಮದುರ್ಗದ ಸಿ ಎಸ್ ಬೆಂಬಳಗಿ ಕಲಾ ಹಾಗೂ ವಾಣಿಜ್ಯ ಪಾಲರೇಶಾ ವಿಜ್ಞಾನ ಮಹಾವಿದ್ಯಾಲಯದಲ್ಲಿ ಎಕವಲಯ ಪಂದ್ಯಾವಳಿ ಹಾಗೂ ಬ್ಲೂ ಆಯ್ಕೆ ನಡೆದಿತ್ತು, ವಿದ್ಯಾರ್ಥಿಯ ಸಾಧನೆಗಾಗಿ ಸಂಸ್ಥೆಯ ಅಧ್ಯಕ್ಷ ವಿಜಯಕುಮಾರ ಸೋನವಾಲ್ಕರ,ಉಪಾಧ್ಯಕ್ಷ ಸುಭಾಸ ಸೋನವಾಲ್ಕರ ಪ್ರಾಚಾರ್ಯ ಪ್ರೋ ಸಂಗಮೇಶ ಗುಜಗೊಂಡ ಹಾಗೂ ಸಿಬ್ಬಂದಿ ವರ್ಗ ಅಭಿನಂದಿಸಿದ್ದಾರೆ,

# ಬೆಂಬಲ ಬೆಲೆಯಲ್ಲಿ ಬಿಳಿಜೋಳ ಖರೀದಿ

ಬಾಗಲಕೋಟೆ : ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ಕೇಂದ್ರ ಸರಕಾರ ಬೆಂಬಲ ಬೆಲೆ ಯೋಜನೆಯಡಿ ಎಫ್.ಎ.ಕ್ಯೂ ಗುಣಮಟ್ಟದ ಬಿಳಿಜೋಳ (ಮಾಲದಂಡಿ) ಉತ್ಪನ್ನವನ್ನು ಪ್ರತಿ ಕ್ವಿಂಟಲ್‌ಗೆ 3225 ರೂ.ಗಳಂತೆ ಹಾಗೂ ಬಿಳಿಜೋಳ (ಹೈಬ್ರಡ್) ಪ್ರತಿ ಕ್ವಿಂಟಲ್‌ಗೆ 3180 ರೂ.ಗಳಂತೆ ಖರೀದಿಸಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಜಾನಕಿ ಕೆ.ಎಂ ಹೇಳಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ ಅವರು ಪ್ರತಿ ರೈತರಿಂದ ಪ್ರತಿ ಎಕರೆಗೆ 10 ಕ್ವಿಂಟಲ್ ಜೋಳವನ್ನು ಖರೀದಿಸಲಾಗುತ್ತಿದೆ. ಖರೀದಿಗೆ ನೊಂದಣಿ ಕಾರ್ಯ 1, ಜನವರಿ 2024 ರಿಂದ ಮಾರ್ಚ 31 ವರೆಗೆ ಕೈಗೊಳ್ಳಲಾಗುತ್ತಿದೆ. ಕೆ.ಎಫ್.ಸಿ.ಎಸ್.ಸಿ ಖರೀದಿ ಏಜೇನ್ಸಿಯಾಗಿದ್ದು, ರೈತರು ನೋಂದಣಿ ಕಾರ್ಯವನ್ನು ಕೈಗೊಳ್ಳುತ್ತಾರೆ. ನೋಂದಣಿ ಮತ್ತು ಖರೀದಿ ಕೇಂದ್ರಗಳಲ್ಲಿ ಆನ್‌ಲೈನ್ ಮುಖಾಂತರ ಮಾಡಲಾಗುತ್ತದೆ. ಖರೀದಿ ಕೇಂದ್ರಗಳಲ್ಲಿ ಕೃಷಿ ಇಲಾಖೆಯಿಂದ ಪಡೆದಿರುವ ಫ್ರೂಟ್ಸ್ ಐಡಿ, ಆಧಾರ ಕಾರ್ಡ, ಚಾಲ್ತಿಯಲ್ಲಿರುವ ಬ್ಯಾಂಕ್ ಖಾತೆಯ ಪಾಸ್‌ಬುಕ್ ಝರಾಕ್ಸ್ ಪ್ರತಿಯೊಂದಿಗೆ ನೊಂದಣಿ ಮಾಡಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಆಯಾ ತಾಲೂಕಿನ ಕೆ.ಎಫ್.ಸಿ.ಎಸ್.ಸಿ ವ್ಯವಸ್ಥಾಪಕರು ಸಂಪರ್ಕಿಸಬಹುದಾಗಿದೆ.

**ಖರೀದಿ ಕೇಂದ್ರಗಳ ವಿವರ :** ಬಾಗಲಕೋಟೆ ಎ.ಪಿ.ಎಂ.ಸಿ ಮುಖ್ಯ ಮಾರುಕಟ್ಟೆ ಪ್ರಾಂಗಣ, ಹುನಗುಂದ ಎಪಿಎಂಸಿ ಮುಖ್ಯ ಮಾರುಕಟ್ಟೆ ಪ್ರಾಂಗಣ, ಇಲಕಲ್ಲ ಎಪಿಎಂಸಿ ಉಪ ಮಾರುಕಟ್ಟೆ ಪ್ರಾಂಗಣ, ಬಾದಾಮಿ ಎಪಿಎಂಸಿ ಮುಖ್ಯ ಮಾರುಕಟ್ಟೆ ಪ್ರಾಂಗಣ, ಗುಳೇದಗುಡ್ಡ ಹೊಳೆಬಸು ಶೆಟ್ಟರ ಗೋದಾಮು, ಬೀಳಗಿ ಟಿ.ಎ.ಪಿ.ಎಂ.ಎಸ್ ಗೋದಾಮು, ಜಮಖಂಡಿ ಎಪಿಎಂಸಿ ಮುಖ್ಯ ಮಾರುಕಟ್ಟೆ ಪ್ರಾಂಗಣ, ರಬಕವಿ–ಬನಹಟ್ಟಿ, ಅನಗಂಡಿ, ತೇರದಾಳ ರಸ್ತೆಯಲ್ಲಿರುವ ಕೆ.ಎಫ್.ಸಿ.ಎಸ್.ಸಿ ವ್ಯವಸ್ಥಾಪಕರು, ಮುಧೋಳ ವ್ಯವಸ್ಥಾಪಕರು ಕೆ.ಎಫ್.ಸಿ.ಎಸ್.ಸಿ ಕೇಂದ್ರಗಳಲ್ಲಿ ನೋಂದಣಿ ಮಾಡಿಸುವಂತೆ ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

# ಕರ್ನಾಟಕ ಕ್ರೀಡಾ ಪೋಷಕರ ಪ್ರಶಸ್ತಿಗೆ ಅರ್ಜಿ

ಬಾಗಲಕೋಟೆ : ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ 2023–24 ನೇ ಸಾಲಿಗೆ ರಾಜ್ಯದ ಕ್ರೀಡಾ ಪೋಷಕರಿಗೆ ಪ್ರೋತ್ಸಾಹಿಸುವ ಉದ್ದೇಶದಿಂದ ಪ್ರತಿ ವರ್ಷ ಕ್ರೀಡಾ ಪೋಷಕರನ್ನು ಗುರುತಿಸಿ ತಲಾ 5 ಲಕ್ಷ ರೂ.ಗಳ ನಗದು ಬಹುಮಾನವನ್ನು ನೀಡಿ ಕರ್ನಾಟಕ ಕ್ರೀಡಾ ಪೋಷಕ ಪ್ರಶಸ್ತಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ.

ಕ್ರೀಡಾ ಕ್ಷೇತ್ರದಲ್ಲಿ ತಮ್ಮನ್ನು ತೊಡಗಿಸಿಕೊಂಡು ಕ್ರೀಡೆಯ ಅಭಿವೃದ್ಧಿಗೆ ನೆರವು ನೀಡಿ 5 ವರ್ಷಗಳಲ್ಲಿ ರಾಜ್ಯ, ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಕ್ರೀಡಾ ಕ್ಷೇತ್ರದಲ್ಲಿ ಕೊಡುಗೆ ನೀಡಿದ ಕ್ರೀಡಾ ಪೋಷಕರು ಈ ಪ್ರಶಸ್ತಿಗೆ ಅರ್ಹರಾಗಿರುತ್ತಾರೆ. (ಕ್ರೀಡಾ ಸಾಧನೆ ಪ್ರಸ್ತಾವನೆ ವರದಿ ಪ್ರಶಸ್ತಿ ಪ್ರಮಾಣ ಪತ್ರಗಳನ್ನು ಕಡ್ಡಾಯವಾಗಿ ಸಲ್ಲಿಸತಕ್ಕದ್ದು). ಕರ್ನಾಟಕ ನಿವಾಸಿಗಳಲ್ಲದ ಹಾಗೂ ರಾಜ್ಯದ ಕ್ರೀಡಾ ಕ್ಷೇತ್ರಗಳಲ್ಲಿ ತೊಡಗಿಸಿಕೊಂಡಿರದೇ ಇರುವ ಕ್ರೀಡಾ ಪೋಷಕರುಗಳು ಈ ಪ್ರಶಸ್ತಿಗೆ ಅರ್ಹರಾಗಿರುವುದಿಲ್ಲ. ಕ್ರಿಮಿನಲ್ ಹಿನ್ನೆಲೆ ಇಲ್ಲ ಎಂಬ ಬಗ್ಗೆ ಪೋಲಿಸ್ ವೆರಿಫಿಕೆಷನ್ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಲ್ಲಿಸತಕ್ಕದ್ದು.

ಕರ್ನಾಟಕ ಕ್ರೀಡಾ ಪೋಷಕ ಪ್ರಶಸ್ತಿಗೆ ಅರ್ಜಿ ಸಲ್ಲಿಸಲು ಆಸಕ್ತ ಕ್ರೀಡಾ ಪೋಷಕರು ನಿಗದಿತ ಅರ್ಜಿ ನಮೂನೆಯನ್ನು ಪಡೆದು ಅಗತ್ಯ ದಾಖಲೆಗಳೊಂದಿಗೆ ಸಲ್ಲಿಸುವ ಅರ್ಜಿ ಅವಧಿಯನ್ನು ಡಿಸೆಂಬರ 8 ವರೆಗೆ ವಿಸ್ತರಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂಸಂ.08354–235896, 9945284771ಗೆ ಸಂಪರ್ಕಿಸುವಂತೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಸ್ ನಿಲ್ದಾಣ ಹಾಗೂ ಪೋಲಿಸ್ ಚೌಕಿ ಮರು ನಿರ್ಮಾಣ ಮಾಡುವಂತೆ ಮನವಿ

ವಿದ್ಯಾಗಿರಿ : ಬಾಗಲಕೋಟ ವಿದ್ಯಾಗಿರಿ ವಲಯದ ಸಮಸ್ತ ನಾಗರಿಕರು ತಮ್ಮಲ್ಲಿ ವಿನಂತಿಸಿಕೊಳ್ಳುವುದೇನೆಂದರೆ, 1992 ರಲ್ಲಿ ನಾವೆಲ್ಲರೂ ದೇಣಿಗೆ ಸಂಗ್ರಹದ ಮೂಲಕ ವಿದ್ಯಾಗಿರಿಯ ಮಧ್ಯಭಾಗದಲ್ಲಿರುವ 13ನೇ ಕ್ರಾಸ್ ಎದುರಿಗೆ ಇರುವ ಬಸ್ ನಿಲ್ದಾಣ ಹಾಗೂ ಪೋಲಿಸ್ ಚೌಕಿ ನಿರ್ಮಾಣ ಮಾಡಲಾಗಿತ್ತು. ಆದರೆ ಈಗ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದಿಂದ ರಸ್ತೆ ಅಗಲೀಕರಣ ಕಾರ್ಯ ನಡೆದಿದ್ದು ಸದರಿ ಇರುವ ಬಸ್ ನಿಲ್ದಾಣ ಹಾಗೂ ಪೋಲಿಸ್ ಚೌಕಿಯನ್ನು ಕೆಡುವುತ್ತಿದ್ದು, ಇದರಿಂದ ಸಾರ್ವಜನಿಕರಿಗೆ ತುಂಬ ತೊಂದರೆಯಾಗುತ್ತದೆ. ಆದುದರಿಂದ ಪರ್ಯಾಯವಾಗಿ ಲ್ಯಾಂಡ್ ಅಕ್ವಿಜೀಶನ್ ಮಾಡಿಕೊಂಡು ಇದ್ದ ಸ್ಥಳದ ಸಮೀಪದಲ್ಲಿಯೇ ಹೊಸ ವಿದ್ಯಾಗಿರಿ ಬಸ್ ನಿಲ್ದಾಣ ಹಾಗೂ ಪೋಲಿಸ್ ಚೌಕಿಯನ್ನು ನಿರ್ಮಿಸಿಕೊಡಬೇಕೆಂದು ಸಮಸ್ತ ವಿದ್ಯಾಗಿರಿ ವಲಯದ ನಾಗರಿಕರ ಪರವಾಗಿ ಮತ್ತು ಬ. ಮಡಿವಾಳರ, ಸಂಗಮೇಶ ಹೂಲಗೇರಿ ಸಿದ್ದಯ್ಯ ಕಲ್ಮಠ ಪ್ರಶಾಂತ ಜಯಣ್ಣವರ, ಶಿವು ಮೇಲ್ನಾಡ, ಪ್ರಕಾಶ ಗಳವೆ, ಪ್ರಶಾಂತ ಲಕ್ಕುಂಡಿ, ಬಸು ಬೆಳ್ಳುಬಿ, ಶಶಿಧರ ಕಡಕೋಳಮಠ ವಕೀಲರು, ಬಿ.ಎಮ್. ಕಿಣಗಿ, ನಾಯ್ಕರ ಸರ, ಜೋಶಿ ವಕೀಲರು, ಡಾ. ಹೇಮಾ ಪಾಟೀಲ, ಡಾ. ಚೌಧರಿ ಡಾ. ಚಂದ್ರಶೇಖರ ಗಂಗಲ್, ಚಂದ್ರು ವಿರಕ್ತಿಮಠ, ಕುಮಾರ ಮುಳ್ಳೂರ, ಈಶ್ವರ ಕುದರಿಕನ್ನೂರ, ಶಿವಲಿಂಗಪ್ಪ ಕುದರಿಕನ್ನೂರು ಇವರುಗಳು ಕಾರ್ಯನಿವಾಹಕ ಅಭಿಯಂತರರು, ರಾಷ್ಟ್ರೀಯ ಹೆದ್ದಾರಿ ನಿರ್ಮಾಣ ಪ್ರಾಧಿಕಾರ ವಿಜಯಪುರ ವಿಭಾಗ ವಿಜಯಪುರ ಇವರಿಗೆ ಮನವಿ ಮಾಡಿದ್ದಾರೆ.

# ಕಲಾ ಪ್ರತಿಭೆ ಅನಾವರಣಗೊಂಡ ಚಿಗುರು







ವಿಜಯಪುರ : ಮಕ್ಕಳಲ್ಲಿರುವ ಕಲಾ ಪ್ರತಿಭೆಯನ್ನು ಗುರುತಿಸಿ ಪ್ರೋತ್ಸಾಹಿಸುವ ಅವಶ್ಯಕತೆ ಇದೆ ಎಂದು ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಪ್ರಾಥಮಿಕ ಹಾಗೂ ಪ್ರೌಢಶಾಲೆಯ ಅಧ್ಯಕ್ಷರಾದ ಸುರೇಶ ದೇಸಾಯಿ ಅಭಿಪ್ರಾಯಪಟ್ಟರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಬುಧವಾರ ನಗರದ ವಿವೇಕನಗರದ ಶಿವಶರಣೆ ಹೆಮರೆಡ್ಡಿ ಮಲ್ಲಮ್ಮ ಪ್ರಾಥಮಿಕ ಹಾಗೂ ಪ್ರೌಢಶಾಲೆಯಲ್ಲಿ ಕರ್ನಾಟಕ ಸಂಭ್ರಮ–50ರ ಅಂಗವಾಗಿ ಆಯೋಜಿಸಿದ ಚಿಗುರು ಸಾಂಸ್ಕೃತಿಕ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಶೈಕ್ಷಣಿಕ ಹಾಗೂ ಕ್ರೀಡೆಯ ಜೊತೆಗೆ ಮಕ್ಕಳಿಗೆ ನಮ್ಮ ಕಲೆ ಸಂಸ್ಕೃತಿ ಸಾಹಿತ್ಯವನ್ನು ಪರಿಚಯಿಸುವುದರೊಂದಿಗೆ ಅವರಲ್ಲಿ ಅಡಗಿರುವ ಕಲಾ ಪ್ರತಿಭೆಯನ್ನು ಬೆಳಕಿಗೆ ತರಲು ಶಿಕ್ಷಕರು ಹಾಗೂ ಪೋಷಕರು ಪ್ರಯತ್ನಿಸಬೇಕು ಎಂದು ಅವರು ಹೇಳಿದರು.

ಮುಖ್ಯ ಅತಿಥಿಗಳಾಗಿ ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ಜಿ.ಎಂ.ಬಿರಾದಾರ, ಪ್ರಾಥಮಿಕ ವಿಭಾಗದ ಮುಖ್ಯ ಗುರುಗಳಾದ ಇ.ಜಿ.ಬಿರಾದಾರ, ಕರ್ನಾಟಕ ನಾಟಕ ಅಕಾಡೆಮಿ ಮಾಜಿ ಅಧ್ಯಕ್ಷರಾದ ಎಲ್.ಬಿ.ಶೇಖ ಮಾಸ್ತರ ಭಾಗವಹಿಸಿದ್ದರು. ಪ್ರಾಸ್ತಾವಿಕವಾಗಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಬಿ.ನಾಗರಾಜ ಮಾತನಾಡಿ, ಸ್ವಾಗತಿಸಿದರು. ಎಚ್.ಎ.ಮಮದಾಪುರ ಕಾರ್ಯಕ್ರಮ ನಿರೂಪಿಸಿದರು.

ಕಾರ್ಯಕ್ರಮದಲ್ಲಿ ವಿಜಯಪುರದ ಕುಮಾರಿ ಸುಮಯ್ಯಾ ಶೇಖ ಇವರಿಂದ ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ, ನಾಟ್ಯ ಕಲಾ ಅಕಾಡೆಮಿಯಿಂದ ಸಮೂಹ ನೃತ್ಯ, ಹಿಟ್ನಳ್ಳಿಯ ಕುಮಾರಿ ನಿಜಾಬಾಯಿ ಹೋಸಾಳಿ ಅವರಿಂದ ಏಕಾಪಾತ್ರಾಭಿನಯ, ಜಾನವಿ ಎನ್.ಗೌಡ ಅವರಿಂದ ಸುಗಮ ಸಂಗೀತ, ಕು.ಲಕ್ಷ್ಮೀ ಮುರನಕೇರಿ ಅವರಿಂದ ಜಾನಪದ ಗೀತೆಗಳು, ಬಬಲೇಶ್ವರದ ಕುಮಾರ ಸಮರ್ಥ ಸಂಕೊಂಡ ಅವರಿಂದ ನಲಿ–ಕಲಿ ನಾಟಕ ಪ್ರದರ್ಶನ ಸೇರಿದಂತೆ ವಿವಿಧ ಸಾಂಸ್ಕೃತಿ ಕಾರ್ಯಕ್ರಮಗಳು ಜರುಗಿದವು.

# ವೃತ್ತಕ್ಕೆ ಶ್ರೀ ಸೇವಾಲಾಲ ಮಹಾರಾಜ ನಾಮಕರಣ: ಆಕ್ಷೇಪಣೆ ಆಹ್ವಾನ

ವಿಜಯಪುರ ಡಿ.06(ಕರ್ನಾಟಕ ವಾರ್ತೆ): ವಿಜಯಪುರ ಮಹಾನಗರ ಪಾಲಿಕೆಯ ವ್ಯಾಪ್ತಿಯ ವಿಜಯಪುರ ನಗರದ ಅಲ್ಲಾಪುರ ತಾಂಡಾ ಹತ್ತಿರ ಸಿಂದಗಿ ರಸ್ತೆ (ಉಕ್ಕಲಿಗೆ ಹೋಗುವ ರಸ್ತೆ)ಯ ವೃತ್ತಕ್ಕೆ ಶ್ರೀ ಸೇವಾಲಾ ಮಹಾರಾಜ ವೃತ್ತವೆಂದು ನಾಮಕರಣ ಮಾಡಲು ಮಹಾನಗರ ಪಾಲಿಕೆ ಸಾಮಾನ್ಯ ಸಭೆಯಲ್ಲಿ ಠರಾವು ಮಾಡಲಾಗಿದೆ. ಸದರಿ ಠರಾವಿನ ಕುರಿತು ಸಾರ್ವಜನಿಕರಲ್ಲಿ ಆಕ್ಷೇಪಣೆಗಳಿದ್ದಲ್ಲಿ ಈ ಪ್ರಕಟಣೆಯ 30 ದಿನಗಳೊಳಗಾಗಿ ತಮ್ಮ ಆಕ್ಷೇಪಣೆಗಳನ್ನು ಮಹಾನಗರ ಪಾಲಿಕೆಗೆ ಸಲ್ಲಿಸುವಂತೆ ಪಾಲಿಕೆ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೇಂದ್ರದಿಂದ ರಾಜ್ಯಕ್ಕೆ ರಸ್ತೆ ನಿರ್ಮಾನಕ್ಕೆ 663 ಕೋಟಿ



ಮೂಡಲಗಿ : ಕೇಂದ್ರ ರಸ್ತೆ ಮತ್ತು ಮೂಲಸೌಕರ್ಯ ನಿಧಿ ಯೋಜನೆಯಡಿ ಕರ್ನಾಟಕ ರಾಜ್ಯದಲ್ಲಿ 663 ಕೋಟಿ ರೂ.ಗಳ ವೆಚ್ಚದಲ್ಲಿ ಸುಮಾರು 241 ಕಿ.ಮೀ ಉದ್ದದ 36 ರಾಜ್ಯ ರಸ್ತೆ ಯೋಜನೆಗಳ ಕಾಮಗಾರಿಗಳು ಅನುಷ್ಠಾನದಲ್ಲಿವೆ. ಸೆಪ್ಟೆಂಬರ್ 2024 ರೊಳಗೆ ಹಂತ ಹಂತವಾಗಿ ಪೂರ್ಣಗೊಳಿಸುವ ಗುರಿ ಹೊಂದಿದೆ ಎಂದು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿಗಳ ಸಚಿವ ನಿತಿನ್ ಗಡ್ಕರಿ ಅವರು ಲಿಖಿತ ಉತ್ತರದಲ್ಲಿ ಮಾಹಿತಿ ನೀಡಿದ್ದಾರೆಂದು ರಾಜ್ಯಸಭಾ ಸಂಸದ ಈರಣ್ಣ ಕಡಾಡಿ ಹೇಳಿದರು.

ಸಂಸತ್ತಿನ ಚಳಿಗಾಲ ಅಧಿವೇಶನದಲ್ಲಿ ಕರ್ನಾಟಕ ರಾಜ್ಯದಲ್ಲಿ ಕೇಂದ್ರ ರಸ್ತೆ ಮತ್ತು ಮೂಲಸೌಕರ್ಯ ನಿಧಿ ಯೋಜನೆಯಡಿ ರಸ್ತೆಗಳ ನಿರ್ಮಾಣದ ಕುರಿತು ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು ಕಳೆದ ಮೂರು ವರ್ಷಗಳಲ್ಲಿ ಕರ್ನಾಟಕ ರಾಜ್ಯದಲ್ಲಿ ರಸ್ತೆಗಳ ಅಭಿವೃದ್ಧಿ ಮತ್ತು ನಿರ್ವಹಣೆಗಾಗಿ 2020–21 ರಲ್ಲಿ 434.99 ಕೋಟಿ. ರೂ, 2021–22 ರಲ್ಲಿ 442.90 ಕೋಟಿ ರೂ., 2022–23 ರಲ್ಲಿ 465.27 ಕೋಟಿ ರೂ. ಮತ್ತು ಪ್ರಸಕ್ತ ವರ್ಷದಲ್ಲಿ 492.44 ಕೋಟಿ ರೂ.ಗಳನ್ನು ಕೇಂದ್ರ ರಸ್ತೆ ಮತ್ತು ಮೂಲಸೌಕರ್ಯ ನಿಧಿ ಯೋಜನೆಯಡಿ ಬಿಡುಗಡೆ ಮಾಡಲಾಗಿದೆ ಎಂದರು.

ಯೋಜನಾ ಮೇಲ್ವಿಚಾರಣೆ, ಕಾಮಗಾರಿಗಳ ಗುಣಮಟ್ಟದ ಅಗತ್ಯತೆ, ಅಧಿಕಾರಿಗಳು ಮತ್ತು ಗುತ್ತಿಗೆದಾರರ ಜವಾಬ್ದಾರಿ, ಸ್ವತಂತ್ರ ಪರೀಕ್ಷೆಗಳನ್ನು ನಡೆಸುವುದು, ಪಿ.ಡಬ್ಲ್ಯೂಡಿ ಸಿಬ್ಬಂದಿಗೆ ತರಬೇತಿ ನೀಡುವ ಜವಾಬ್ದಾರಿ ಸೇರಿದಂತೆ ರಾಜ್ಯ ಸರ್ಕಾರದಿಂದ ನೇಮಕಗೊಂಡ ತಜ್ಞರು ಮತ್ತು ಸಹಾಯಕ ಸಿಬ್ಬಂದಿಯನ್ನು ಒಳಗೊಂಡಿರುವ ಸಿವಿಲ್ ಇಂಜಿನಿಯರ್‌ನಲ್ಲಿ ಪದವಿ ಮತ್ತು 10 ವರ್ಷಗಳ ಅನುಭವ ಹೊಂದಿರುವ ಸಿವಿಲ್ ಇಂಜಿನಿಯರ್‌ಗಳಿಂದ ಕಾಮಗಾರಿಗಳ ಪರಿಶೀಲನೆ ಮಾಡಲಾಗುತ್ತಿದೆ ಎಂದು ಸಚಿವರು ಉತ್ತರಿಸಿದ್ದಾರೆಂದು ಸಂಸದ ಈರಣ್ಣ ಕಡಾಡಿ ಮಾಹಿತಿ ನೀಡಿದರು.

# ನಿಗಮದ ವಿವಿಧ ಸೌಲಭ್ಯ: ಅರ್ಜಿ ಅವಧಿ ವಿಸ್ತರಣೆ

ಬಾಗಲಕೋಟೆ : ಡಾ.ಬಿ.ಆರ್ ಅಂಬೇಡ್ಕರ ಅಭಿವೃದ್ಧಿ ನಿಗಮ, ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ, ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ ಹಾಗೂ ಕರ್ನಾಟಕ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮಗಳಿಂದ ಪರಿಶಿಷ್ಟ ಜಾತಿಯ ಸಮುದಾಯದ ಆರ್ಥಿಕ ಅಭಿವೃದ್ಧಿಗಾಗಿ ಸ್ವಯಂ ಉದ್ಯೋಗ ಕೈಗೊಳ್ಳಲು ಸ್ವಯಂ ಉದ್ಯೋಗ ನೇರಸಾಲ ಯೋಜನೆ, ಉದ್ಯಮಶೀಲತಾ ಅಭಿವೃದ್ಧಿ ಯೋಜನೆ, ಮೈಕ್ರೋ ಕ್ರೆಡಿಟ್ ಯೋಜನೆ, ಗಂಗಾ ಕಲ್ಯಾಣ ಯೋಜನೆ ಹಾಗೂ ಭೂ–ಒಡೆತನ ಯೋಜನೆಗಳಡಿ ಅರ್ಹ ಫಲಾಪೇಕ್ಷೀಗಳಿಂದ ಅರ್ಜಿಗಳನ್ನು ಸ್ವೀಕರಿಸುವ ಅವಧಿಯನ್ನು ಡಿಸೆಂಬರ 15 ವರೆಗೆ ವಿಸ್ತರಿಸಲಾಗಿರುತ್ತದೆ. ಅರ್ಜಿಗಳನ್ನು ಕರ್ನಾಟಕ ಒನ್ ಹಾಗೂ ಗ್ರಾಮ ಒನ್ ಕೇಂದ್ರಗಳಲ್ಲಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವ್ಯವಸ್ಥಾಪಕರ ಕಛೇರಿ, ಕೊಠಡಿ ನಂ.201, ಜಿಲ್ಲಾ ಆಡಳಿತ ಭವನ, ನವನಗರ, ಬಾಗಲಕೋಟೆ ಅವರನ್ನು ಸಂಪರ್ಕಿಸಬಹುದಾಗಿದೆ.

# ಮಹಿಳೆ ಕಾಣೆ: ಪತ್ತೆಗೆ ಮನವಿ



ವಿಜಯಪುರ : ದೇವರ ಹಿಪ್ಪರಗಿ ತಾಲೂಕಿನ ನಿವಾಳಖೇಡ ಗ್ರಾಮದ ನಿವಾಸಿ 22 ವರ್ಷ ವಯಸ್ಸಿನ ಶೃತಿ ತಂದೆ ಹಣಮಂತ ಮೇಲಿನಮನಿ ಎಂಬ ಮಹಿಳೆ ದಿನಾಂಕ:24-11-2023 ರಿಂದ ಕಾಣೆಯಾಗಿರುವ ಕುರಿತು ದೇವರ ಹಿಪ್ಪರಗಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಕಾಣೆಯಾದ ಮಹಿಳೆಯ ಪತ್ತೆಗೆ ಮನವಿ ಮಾಡಿಕೊಳ್ಳಲಾಗಿದೆ.

ಕಾಣೆಯಾದ ಮಹಿಳೆಯು 4 ಪೂಟ್ 4 ಇಂಚು ಎತ್ತರ, ಕೋಲು ಮುಖ, ಚೂಪು ಮೂಗು, ಮೈಯಿಂದ ಸಾಧಾರಣ, ಸಾದಗೆಂಪು ಮೈ ಬಣ್ಣ,ಕರಿ ಕೂದಲು ಹೊಂದಿದ್ದು, ಕನ್ನಡ ಭಾಷೆ ಮಾತನಾಡುತ್ತಿದ್ದು, ಕಾಣೆಯಾದ ಸಂದರ್ಭದಲ್ಲಿ ಹಳದಿ ಬಣ್ಣದ ಚೂಡಿದಾರ ಟಾಪ ಹಾಗೂ ಬಿಳಿ ಬಣ್ಣದ ಲೆಗಿನ್ಸ್ ಧರಿಸಿರುತ್ತಾಳೆ. ಈ ಚಹರೆಪಟ್ಟಿಯುಳ್ಳ ಮಹಿಳೆ ಪತ್ತೆಯಾದಲ್ಲಿ ಸಾರ್ವಜನಿಕರು ಸಿ.ಪಿ.ಐ ವಿಜಯಪುರ ಗ್ರಾಮೀಣ ವೃತ್ತ ದೂ: 08352-251217, ದೇವರ ಹಿಪ್ಪರಗಿ ಪೊಲೀಸ್ ಠಾಣೆ ಸಂಖ್ಯೆ: 08424283033 ಕಂಟ್ರೋಲ್ ರೂಂ ನಂ.08352250844 ಸಂಖ್ಯೆಗೆ ಮಾಹಿತಿ ನೀಡುವಂತೆ ಠಾಣೆಯ ಪೊಲೀಸ್ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮುಸ್ಲಿಂರಿಗೂ ದೇಶದ ಆಸ್ತಿಯಲ್ಲಿ ಪಾಲು ಸಿಗಬೇಕು: ಬಿಜೆಪಿಗರು ಅಕ್ಷೇಪ ವೆತ್ತಿ ಬೊಬ್ಬೇ ಹೊಡೆಯುತ್ತಿರುವುದು ಸರಿ ಅಲ್ಲ: ಕಲಬುರ್ಗಿ



ಇಳಕಲ್ : ಮುಖ್ಯಮಂತ್ರಿ ಶ್ರೀ ಸಿದ್ಧರಾಮಯ್ಯನವರು ಹುಬ್ಬಳ್ಳಿಯ ಮುಸ್ಲಿಂ ಧರ್ಮ ಗುರುಗಳ ಸಮಾವೇಶದಲ್ಲಿ ಮುಸ್ಲಿಂರಿಗೂ ಈ ದೇಶದ ಆಸ್ತಿಯಲ್ಲಿ ಪಾಲು ಸಿಗಬೇಕು ಎಂಬ ಹೇಳಿಕೆ ಜೊತೆಗೆ ರಾಜ್ಯದ ಮುಸಲ್ಮಾನರಿಗೆ 10 ಸಾವಿರ ಕೋಟಿ ಅನುದಾನ ನೀಡುತ್ತೇನೆ ಎಂಬ ಹೇಳಿಕೆಗೆ ಬಿಜೆಪಿಗರು ಅಕ್ಷೇಪ ವೆತ್ತಿ ಬೊಬ್ಬೇ ಹೊಡೆಯುತ್ತಿರುವುದು ಸರಿ ಅಲ್ಲ ಎಂದು ಕರ್ನಾಟಕ ಮುಸ್ಲಿಂ ಯೂನಿಟಿಯ ರಾಜ್ಯಾಧ್ಯಕ್ಷ ಜಬ್ಬಾರ ಕಲಬುರ್ಗಿ ಆಕ್ಷೇಪಿಸಿದ್ದಾರೆ.

ಅವರಿಂದು ಪತ್ರಿಕಾ ಹೇಳಿಕೆಯೊಂದನ್ನು ಬಿಡುಗಡೆ ಮಾಡಿ. ಅಧಿಕಾರ ವಿರುವಾಗ ಬಿಜೆಪಿಯವರು ಸಣ್ಣ-ಸಣ್ಣ ಸಮೂದಾಯ ಜಾತಿಯವರನ್ನು ಓಲೈಕೆ ಮೂಲಕವೇ ಮತ ಪಡೆಯುವ ರಾಜಕಾರಣ ಮಾಡಿಲ್ಲವೇ? ಜಾತಿಗೊಂದು ನಿಗಮ ಮಂಡಳಿ ಸೃಜಿಸಿ ಓಲೇಕೆ ಮಾಡಿಲ್ಲವೆ ಎಂದು ಪ್ರಶ್ನಿಸಿದ್ದಾರೆ.

ಮುಸ್ಲಿಂರ ಪ್ರಾತಿನಿಧ್ಯದ ಪ್ರಶ್ನೆ ಬಂದಾಗ ಏಕಿಷ್ಟು ಉರಿ? ಕಾಂಗ್ರೇಸ ಪಕ್ಷವನ್ನು ಅಧಿಕಾರಕ್ಕೆ ತರುವಲ್ಲಿ ಮುಸ್ಲಿಂ ಸಮೂದಾಯ ಶೇ. 99% ಪ್ರತಿಶತ ಮತ ನೀಡಿದವರಾಗಿದ್ದಾರೆ ಅವರ ಓಲೈಕೆ ಒಬ್ಬ ಮುಖ್ಯಮಂತ್ರಿಯಾಗಿ ಸಿದ್ಧರಾಮಯ್ಯನವರು ಮಾಡಿದ್ದಾರೆ ಏಕೇಂದರೆ ಧಾರ್ಮಿಕ ಅಲ್ಪಸಂಖ್ಯಾತರು ಸಾಮಾಜಿಕವಾಗಿ ಮತ್ತು ಶೈಕ್ಷಣಿಕವಾಗಿ ಹಾಗೂ ಆರ್ಥಿಕವಾಗಿ ಹಿಂದುಳಿದವರಾಗಿರುವದನ್ನು ಮನಗೊಂಡು ಅವರ ಅಭಿವೃದ್ಧಿಗೆ ಯೋಜನೆ ರೂಪಿಸಿ ಅನುದಾನ ಬಿಡುಗಡೆ ಮಾಡುವ ಅದರ ಹೇಳಿಕೆಯನ್ನು ಸರಿ ಇದೆ ಎಂದು ಜಬ್ಬಾರ ಕಲಬುರ್ಗಿ ಸಮರ್ಥಿಸಿಕೊಂಡಿದ್ದಾರೆ.

# ಹರ್ ಘರ್ ಗೀತಾ ಕೋಟಿ ಜಪ ಯಜ್ಞ



ವಿಜಯಪುರ : ಬರಲಿರುವ ಜನೇವರಿಯಲ್ಲಿ ಉಡುಪಿ ಶ್ರೀ ಕೃಷ್ಣ ಪರ್ಯಾಯ ಪೀಠ ಅಲಂಕರಿಸಲಿರುವ ಪುತ್ತಿಗೆ ಮಠದ ಕಿರಿಯ ಶ್ರೀಪಾದಂಗಳವರಾದ ಶ್ರೀ ಸುಶ್ರೀಂದ್ರತೀರ್ಥರು ಹರ್ ಘರ್ ಗೀತಾ ಯೋಜನೆ ಮೂಲಕ ಹಮ್ಮಿಕೊಂಡಿರುವ ಕೋಟಿ ಲೇಖನ ಜಪಯಜ್ಞವನ್ನು ಯಶಸ್ವಿಗೊಳಿಸುವಂತೆ ಕರೆ ನೀಡಿದರು. ಅವರು ತಮ್ಮ ವಿಜಯಪುರ ಸಂಚಾರದಲ್ಲಿ ಶ್ರೀಕೃಷ್ಣ-ವಾದಿರಾಜ ಮಠದಲ್ಲಿ ನೀಡಿದ ಅನುಗ್ರಹ ಸಂದೇಶದಲ್ಲಿ ಭಗವದ್ಗೀತೆ ಶ್ರೀಕೃಷ್ಣ ಪರಮಾತ್ಮನ ಉಪದೇಶವಾಗಿದ್ದು ಮಾನವ ಕಲ್ಯಾಣಕ್ಕೆ ಪರಮೋಪಕಾರವಾಗಿದೆ ಎಂದು ಅಭಿಪ್ರಾಯ ಪಟ್ಟರು.

ಪ್ರತಿಯೊಬ್ಬರು ಇದರಲ್ಲಿ ಭಾಗವಹಿಸುವ ಮೂಲಕ ತಮ್ಮ ಜನ್ಮ ಸಾರ್ಥಕ ಮಾಡಿಕೊಳ್ಳಬೇಕೆಂದು ಕರೆ ಕೊಟ್ಟ ಶ್ರೀಗಳು ಈ ಸಲ ಪರ್ಯಾಯದಲ್ಲಿ ಹಿರಿಯ ಶ್ರೀಗಳಾದ ಸುಗುಣೇಂದ್ರ ಶ್ರೀಪಾದರು ಮಹಾದ್ವಾರ ಮತ್ತು ಸ್ವರ್ಣಕೃಷ್ಣನ ಸಮರ್ಪಣೆ ಮಾಡಲಿದ್ದಾರೆಂದರು. ಶ್ರೀಪಾದರು ಸನ್ಯಾಸತ್ವ ಸ್ವೀಕರಿಸಿ 50 ವರ್ಷ ಪೂರ್ಣಗೊಂಡಿದ್ದು ದೇಶ-ವಿದೇಶಗಳಲ್ಲಿ ಅವರಿಗೆ ಸಂಭ್ರಮದ ಸ್ವಾಗತ ಹಾಗೂ ಗೌರವ ಸಮರ್ಪಣೆಗಳ ಸುರಿಮಳೆ ನಡೆದಿದೆ. ಇದು ಅವರ ಜನ ಮೆಚ್ಚುಗೆಯ ಸಂಕೇತ ಎಂದು ವ್ಯಾಖ್ಯಾನಿಸಿದರು. ಇದು ಅವರ ನಾಲ್ಕನೆ ಪರ್ಯಾಯ. ಪ್ರತಿ ಪರ್ಯಾಯದಲ್ಲೂ ಅವರು ವಿವಿಧ ಸೇವಾ ಸಮರ್ಪಣೆ ಮಾಡುತ್ತ ಬಂದಿರುವದು ನಮಗೆಲ್ಲ ಮಾರ್ಗದರ್ಶನ ಎಂದರು. ಸಮಸ್ತ ಭಕ್ತಾದಿಗಳು ತಮ್ಮ ಪರ್ಯಾಯ ಸಮಯದಲ್ಲಿ ಉಡುಪಿ ಶ್ರೀಕೃಷ್ಣನ ದರ್ಶನಕ್ಕೆ ಬರುವಂತೆ ಅವರು ಕರೆ ನೀಡಿದರು.

ಶ್ರೀಕೃಷ್ಣ ವಾದಿರಾಜ ಮಠದ ಆಡಳಿತ ಮಂಡಳಿ ಅಧ್ಯಕ್ಷ ಡಾ. ಕಿರಣ ಚುಳಕಿ, ಕಾರ್ಯದರ್ಶಿ ಪ್ರಕಾಶ ಅಕ್ಕಲಕೋಟ, ಖಜಾಂಚಿ ಅಶೋಕರಾವ್, ಹಿರಿಯ ಸದಸ್ಯರಾದ ವಿ.ಸಿ.ಕುಲಕರ್ಣಿ, ವಿ.ಬಿ.ಕುಲಕರ್ಣಿ,ವಿಕಾಸ ಪದಕಿ, ಗೋವಿಂದ ದೇಶಪಾಂಡೆ, ಹಿರಿಯ ಉಪಾಧ್ಯಕ್ಷ ಡಾ. ಮಲಘಾಣ, ಸದಸ್ಯರಾದ ಗೋವಿಂದ ಜೋಶಿ ಉಪಸ್ಥಿತರಿದ್ದರು. ಪ್ರಾರಂಭದಲ್ಲಿ ಉಪಾಧ್ಯಕ್ಷ ಡಾ. ಆರ್.ಜೆ. ಮಂಗಲಗಿ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಶ್ರೀಮಠದ ವ್ಯವಸ್ಥಾಪಕ ಪಂಡಿತ ವಾಸುದೇವ್ ಆಚಾರ್ಯ ಶ್ರೀಗಳನ್ನು ಅದ್ದೂರಿಯಾಗಿ ಸ್ವಾಗತಿಸಿ ವೇದಿಕೆಗೆ ಕರೆತಂದರು. ನಗರದ ಬ್ರಾಹ್ಮಣ ಸಮಾಜದ ಪ್ರಮುಖರು ಉಪಸ್ಥಿತರಿದ್ದರು. ವಿವಿಧ ಮಠಗಳ ಪದಾಧಿಕಾರಿಗಳು ಶ್ರೀಗಳಿಗೆ ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಿದರು.

# ಡಾ॥ ಬಿ. ಆರ್. ಅಂಬೇಡ್ಕರ ಅವರ 67 ನೇ ಮಹಾ ಪರಿನಿರ್ವಾಣ ಶೋಕ ಆಚರಿಸಿದ ದಲಿತ ವಿದ್ಯಾರ್ಥಿ ಪರಿಷತ್



ವಿಜಯಪುರ : ಜ್ಞಾನವನ್ನು ಹೊಂದದೇ ವಿಮೋಚನೆ ಹೊಂದಲು ಸಾಧ್ಯವಿಲ್ಲ, ಸಂಘಟನಾತ್ಮಕ ಹೋರಾಟವಿಲ್ಲದೇ ಘನತೆಯ ಬದುಕು ಬದಕಲು ಸಾಧ್ಯವಿಲ್ಲ, ಜ್ಞಾನ ದೀವಿಗೆಯು ಶೋಷಣೆಯ ಕತ್ತಲನ್ನು ಸೀಳಿ ಈಡೀ ಪೀಳಿಗೆಯನ್ನು ಬೆಳಕಿನಡೆಗೆ ಕೊಂಡೊಯ್ಯುತ್ತದೆ, ಎಂಭ ಸಂದೇಶವನ್ನು ಬಡವರು, ಶೋಷಿತ ಅಸ್ಪೃಶ್ಯರು, ದುರ್ಬಲ ವರ್ಗದ ಜನರ ಬದುಕಿಗಾಗಿ ತಮ್ಮ ಬದುಕನ್ನೇ ಮುಡಿಪಾಗಿಟ್ಟ ಮಹಾನ ಚೇತನ ಬಾಬಾ ಸಾಹೇಬರು ಇಂದು ನಮ್ಮೊಂದಿಗೆ ಇಲ್ಲ ಎಂಬುದು ತುಂಭಾ ದುಃಖದ ಸಂಘತಿ, ಅವರು ಹಾಕಿದ ಮಾರ್ಗದಲ್ಲಿ ನಾವೆಲ್ಲರೂ ನಡೆಯೋಣ ಎಂದು ದಲಿತ ವಿದ್ಯಾರ್ಥಿ ಪರಿಷತ್ ಜಿಲ್ಲಾ ಸಂಚಾಲಕರಾದ ಅಕ್ಷಯ ಅಜಮನಿ ಮಾತನಾಡಿದರು.

ನಗರದ ದಲಿತ ವಿದ್ಯಾರ್ಥಿ ಪರಿಷತ್ ಜಿಲ್ಲಾ ಕಚೇರಿಯಲ್ಲಿ ಡಾ. ಬಾಬಾ ಸಾಹೇಬ ಅಂಬೇಡ್ಕರ ಅವರ 67 ನೇ ಮಹಾ ಪರಿನಿರ್ವಾಣ ಕಾರ್ಯಕ್ರಮದಲ್ಲಿ ಬಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ, ಮೊಂಬತ್ತಿ ಬೆಳಗಿ ಸಂತಾಪ ಸೂಚಿಸುವ ಮೂಲಕ ಸರಳವಾಗಿ ಆಚರಿಸಲಾಯಿತು.

ಈ ವೇಳೆ ದಲಿತ ವಿದ್ಯಾರ್ಥಿ ಪರಿಷತ್‌ನ ರಾಜ್ಯಾಧ್ಯಕ್ಷರಾದ ಶ್ರೀನಾಥ ಪೂಜಾರಿ, ಮುಖಂಡರಾದ ಸಂಘರ್ಷ ಹೊಸಮನಿ, ಕಾಶಿನಾಥ ಕಟ್ಟಿಮನಿ, ಮಾದೇಶ ಬಾಗೇವಾಡಿ, ಸತೀಶ ಅಂಜುಟಗಿ, ಪ್ರದಾನಿ ನಾಯಕ, ಸೇರಿದಂತೆ ಇತರರು ಇದ್ದರು.

# ದರಪಟ್ಟಿ ಆಹ್ವಾನ

ವಿಜಯಪುರ : ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವಿಜಯಪುರ ಸಹಾಯಕ ನಿರ್ದೇಶಕರ ಕಚೇರಿಯಲ್ಲಿರುವ ಹಳೆಯ ನಿರುಪಯುಕ್ತ ಸಾಮಗ್ರಿಗಳು ಹಾಗೂ ಹಳೆಯ ದಿನಪತ್ರಿಕೆಗಳನ್ನು ವಿಲೇವಾರಿ ಮಾಡಲಾಗುತ್ತಿದೆ.

ಆಸಕ್ತ ಸಂಸ್ಥೆಗಳು ದಿನಾಂಕ : 11-12-2023ರ ಸಂಜೆ 5 ಗಂಟೆಯೊಳಗಾಗಿ ದರಪಟ್ಟಿಗಳನ್ನು ಸಲ್ಲಿಸಬಹುದಾಗಿದ್ದು, ಈ ಕುರಿತಂತೆ ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರ ಕಚೇರಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರ ಹಿಂಭಾಗ, ಸ್ಟೇಶನ್ ರಸ್ತೆ, ವಿಜಯಪುರ ಕಚೇರಿಯನ್ನು ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ.

# ಅರಕೇರಿ-ಗುಡ್ಡಾಪುರ ಜಾತ್ರೆಗೆ ವಿಶೇಷ ಸಾರಿಗೆ ವ್ಯವಸ್ಥೆ

ವಿಜಯಪುರ : ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಡಿ.8 ರಿಂದ 14ರವರೆಗೆ ಜರುಗುವ ಅರಕೇರಿಯ ಶ್ರೀ ಅಮೋಘಸಿದ್ದ ದೇವರ ಜಾತ್ರೆ ಹಾಗೂ ಗುಡ್ಡಾಪುರದ ಶ್ರೀ ದಾನಮ್ಮದೇವಿ ಜಾತ್ರೆಗೆ ಯಾತ್ರಾರ್ಥಿಗಳ ಅನುಕೂಲಕ್ಕಾಗಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವಿಜಯಪುರ ವಿಭಾಗದಿಂದ ವಿಶೇಷ ಬಸ್‌ಗಳ ಕಾರ್ಯಾಚರಣೆ ಕೈಗೊಳ್ಳಲಾಗಿದೆ.

ವಿಜಯಪುರ ವಿಭಾಗದ ವಿಜಯಪುರ, ಇಂಡಿ, ಸಿಂದಗಿ ಮುದ್ದೇಬಿಹಾಳ, ತಾಳಿಕೋಟ ಹಾಗೂ ಬಸವನಬಾಗೇವಾಡಿ ಘಟಕದ ಕೇಂದ್ರ ಬಸ್ ನಿಲ್ದಾಣಗಳಿಂದ ಅರಕೇರಿ ಹಾಗೂ ಗುಡ್ಡಾಪುರಕ್ಕೆ ವಿಶೇಷ ಸಾರಿಗೆಗಳ ಕಾರ್ಯಾಚರಣೆ ಮಾಡಲಾಗುವುದು.

ಪ್ರಯಾಣಿಕರು ಸಾರಿಗೆ ಸೌಲಭ್ಯಕ್ಕಾಗಿ ಹಾಗೂ ಈ ಕುರಿತಂತೆ ಹೆಚ್ಚಿನ ಮಾಹಿತಿಗಾಗಿ ವಿಜಯಪುರ-1 ಮೊ: 7760992263, ವಿಜಯಪುರ-2 ಮೊ: 7760992264, ವಿಜಯಪುರ-3 ಮೊ: 7760914008, ಇಂಡಿ ಮೊ: 7760992265, ಸಿಂದಗಿ ಮೊ: 7760992266, ಮುದ್ದೇಬಿಹಾಳ ಮೊ: 7760992267, ತಾಳಿಕೋಟ ಮೊ: 7760992268, ಬಸವನಬಾಗೇವಾಡಿ ಮೊ: 7760992269, ಕೇಂದ್ರ ಬಸ್ ನಿಲ್ದಾಣ ದೂ:08352-251344 ಹಾಗೂ ವಿಜಯಪುರ ಕೇಂದ್ರ ಬಸ್ ನಿಲ್ದಾಣ ಸಹಾಯಕ ಸಂಚಾರ ವ್ಯವಸ್ಥಾಪಕರ ಮೊ: 7760992258 ಸಂಖ್ಯೆಗೆ ಸಂಪರ್ಕಿಸುವಂತೆ ವಿಭಾಗೀಯ ನಿಯಂತ್ರಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸ್ಥಳೀಯ ಸಾರಿಗೆಗಳ ಕಾರ್ಯಾಚರಣೆಯಲ್ಲಿ ವ್ಯತ್ಯಯ : ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವಿಜಯಪುರ ವಿಭಾಗದಿಂದ

ಡಿ.8 ರಿಂದ 14ರವರೆಗೆ ಅರಕೇರಿಯ ಶ್ರೀ ಅಮೋಘಸಿದ್ದ ದೇವರ ಜಾತ್ರೆ ಹಾಗೂ ಗುಡ್ಡಾಪುರದ ಶ್ರೀ ದಾನಮ್ಮದೇವಿ ಜಾತ್ರೆಗೆ ಹೆಚ್ಚುವರಿ ಸಾರಿಗೆಗಳ ಕಾರ್ಯಾಚರಣೆ ಮಾಡುವುದರಿಮದ ಸ್ಥಳೀಯ ಸಾರಿಗೆಗಳ ಕಾರ್ಯಾಚರಣೆಯಲ್ಲಿ ವ್ಯತ್ಯಯವಾಗಲಿದ್ದು, ಪ್ರಯಾಣಿಕರು ನಿಗಮದೊಂದಿಗೆ ಸಹಕರಿಸುವಂತೆ ವಿಭಾಗೀಯ ನಿಯಂತ್ರಣಾಧಿಕಾರಿಗಳು ಮನವಿ ಮಾಡಿಕೊಂಡಿದ್ದಾರೆ.

# ಕರ್ನಾಟಕ ಕ್ರೀಡಾ ಪೋಷಕರ ಪ್ರಶಸ್ತಿಗೆ ಅರ್ಜಿ

ಬಾಗಲಕೋಟೆ : ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ 2023-24 ನೇ ಸಾಲಿಗೆ ರಾಜ್ಯದ ಕ್ರೀಡಾ ಪೋಷಕರಿಗೆ ಪ್ರೋತ್ಸಾಹಿಸುವ ಉದ್ದೇಶದಿಂದ ಪ್ರತಿ ವರ್ಷ ಕ್ರೀಡಾ ಪೋಷಕರನ್ನು ಗುರುತಿಸಿ ತಲಾ 5 ಲಕ್ಷ ರೂ.ಗಳ ನಗದು ಬಹುಮಾನವನ್ನು ನೀಡಿ ಕರ್ನಾಟಕ ಕ್ರೀಡಾ ಪೋಷಕ ಪ್ರಶಸ್ತಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ.

ಕ್ರೀಡಾ ಕ್ಷೇತ್ರದಲ್ಲಿ ತಮ್ಮನ್ನು ತೊಡಗಿಸಿಕೊಂಡು ಕ್ರೀಡೆಯ ಅಭಿವೃದ್ಧಿಗೆ ನೆರವು ನೀಡಿ 5 ವರ್ಷಗಳಲ್ಲಿ ರಾಜ್ಯ, ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಕ್ರೀಡಾ ಕ್ಷೇತ್ರದಲ್ಲಿ ಕೊಡುಗೆ ನೀಡಿದ ಕ್ರೀಡಾ ಪೋಷಕರು ಈ ಪ್ರಶಸ್ತಿಗೆ ಅರ್ಹರಾಗಿರುತ್ತಾರೆ. (ಕ್ರೀಡಾ ಸಾಧನೆ ಪ್ರಸ್ತಾವನೆ ವರದಿ ಪ್ರಶಸ್ತಿ ಪ್ರಮಾಣ ಪತ್ರಗಳನ್ನು ಕಡ್ಡಾಯವಾಗಿ ಸಲ್ಲಿಸತಕ್ಕದ್ದು). ಕರ್ನಾಟಕ ನಿವಾಸಿಗಳಲ್ಲದ ಹಾಗೂ ರಾಜ್ಯದ ಕ್ರೀಡಾ ಕ್ಷೇತ್ರಗಳಲ್ಲಿ ತೊಡಗಿಸಿಕೊಂಡಿರದೇ ಇರುವ ಕ್ರೀಡಾ ಪೋಷಕರುಗಳು ಈ ಪ್ರಶಸ್ತಿಗೆ ಅರ್ಹರಾಗಿರುವುದಿಲ್ಲ. ಕ್ರಿಮಿನಲ್ ಹಿನ್ನೆಲೆ ಇಲ್ಲ ಎಂಬ ಬಗ್ಗೆ ಪೊಲೀಸ್ ವೆರಿಫಿಕೇಷನ್ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಲ್ಲಿಸತಕ್ಕದ್ದು.

ಕರ್ನಾಟಕ ಕ್ರೀಡಾ ಪೋಷಕ ಪ್ರಶಸ್ತಿಗೆ ಅರ್ಜಿ ಸಲ್ಲಿಸಲು ಆಸಕ್ತ ಕ್ರೀಡಾ ಪೋಷಕರು ನಿಗದಿತ ಅರ್ಜಿ ನಮೂನೆಯನ್ನು ಪಡೆದು ಅಗತ್ಯ ದಾಖಲೆಗಳೊಂದಿಗೆ ಸಲ್ಲಿಸುವ ಅರ್ಜಿ ಅವಧಿಯನ್ನು ಡಿಸೆಂಬರ 8 ವರೆಗೆ ವಿಸ್ತರಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂಸಂ.08354-235896, 9945284771ಗೆ ಸಂಪರ್ಕಿಸುವಂತೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬೀದಿ ನಾಯಿಗಳ ಹಾವಳಿ ತಡೆಗೆ ಕ್ರಮ

ಬಾಗಲಕೋಟೆ : ಬಾಗಲಕೋಟೆ ನಗರಸಭೆ ವ್ಯಾಪ್ತಿಯಲ್ಲಿ ಸಾರ್ವಜನಿಕ ಸ್ಥಳಗಳಲ್ಲಿ ಬೀದಿ ನಾಯಿಗಳಿಂದ ಹಾಗೂ ಸಾರ್ವಜನಿಕರು ನಾಯಿಗಳನ್ನು ಬೀದಿಗೆ ಬಿಡುಗದರಿಂದ ನಗರದಲ್ಲಿ ನಾಯಿಗಳ ಹಾವಳಿ ಹೆಚ್ಚಾಗಿ ಸಾರ್ವಜನಿಕರಿಗೆ ಸ್ವಚ್ಚತೆ ಮತ್ತು ಆರೋಗ್ಯಕ್ಕೆ ಹಾನಿಕಾರಕವಾಗಿರುತ್ತದೆ. ಅಲ್ಲದೇ ಸಾರ್ವಜನಿಕರಿಗೆ ಮತ್ತು ವಾಹನಗಳ ಸಂಚಾರಕ್ಕೆ ತೊಂದರೆಯಾಗುವದಲ್ಲದೇ ಅಪಘಾತಕ್ಕೆ ಕಾರಣವಾಗಬಹುದು. ಆದ್ದರಿಂದ ನಾಯಿಯ ಮಾಲಿಕರು ನಾಯಿಗಳನ್ನು ತಮ್ಮ ಮಾಲ್ಕಿಯ ಜಾಗೆಯ ನಾಯಿ ಬೇಲಿಯಲ್ಲಿಡುವುದು ಅದರಂತೆ ಸಾರ್ವಜನಿಕ ಸ್ಥಳಗಳಲ್ಲಿ ಬಿಡುವ ಸಮಯದಲ್ಲಿ ತಮ್ಮ ಹೆಸರಿನ ಕೊರಳಿನ ಪಟ್ಟಿಯನ್ನು ಅಳವಡಿಸತಕ್ಕದ್ದು. ಇಲ್ಲವಾದಲ್ಲಿ ಇದು ಪುರಸಭೆ ಕಾಯ್ದೆ-1964 ನಿಯಮ 222ರ ಉಲ್ಲಂಘನೆಯಾಗಿರುತ್ತದೆ. ತಪ್ಪಿದಲ್ಲಿ ಪುರಸಭೆ ಕಾಯ್ದೆ 1964 ಪ್ರಕಾರ ಕ್ರಮಜರುಗಿಸಲಾಗುವುದೆಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಬಾದಾಮಿ : ನೂತನ ಬಿಜೆಪಿ ರಾಜ್ಯಾಧ್ಯಕ್ಷ, ಶಾಸಕ ಬಿ.ವೈ.ವಿಜಯೇಂದ್ರ ಇವರನ್ನು ರವಿವಾರ ದೆಹಲಿಯ ಕರ್ನಾಟಕ ಭವನದಲ್ಲಿ ರಾಜ್ಯ ಸಹಕಾರ ಮಹಾಮಂಡಳದ ನಿರ್ದೇಶಕ ಹೊನ್ನಯ್ಯ ಹಿರೇಮಠ ಮತ್ತು ಇತರರು ಹೂಗುಚ್ಚ ನೀಡಿ ಅಭಿನಂದಿಸಿದರು.

# ಡಾ.ಬಿ.ಆರ್.ಅಂಬೇಡ್ಕರ್ ಪರಿನಿರ್ವಾಣ ದಿನದಂದು ವರದಿ ಮಂಡನೆ ಎಸ್ಸಿ ಎಸ್ಟಿ ವಿದ್ಯಾರ್ಥಿಗಳಿಗೂ ವಿದ್ಯಾಸಿರಿ ಜಾರಿಗೆ ಶಿಫಾರಸ್ಸು: ಪಿ.ಎಂ.ನರೇಂದ್ರಸ್ವಾಮಿ

ಬೆಳಗಾವಿ ಸುವರ್ಣ ಸೌಧ : ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ನಡೆದ ಹದಿನಾರನೇ ವಿಧಾನಸಭೆಯಲ್ಲಿ ಕರ್ನಾಟಕ ವಿಧಾನಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ 2023-24ನೇ ಸಾಲಿನ ಮೊದಲನೇ ಹಾಗೂ ಮಧ್ಯಂತರ ವರದಿಯನ್ನು ಒಪ್ಪಿಸಲಾಗಿದೆ ಎಂದು ಕರ್ನಾಟಕ ವಿಧಾನಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ ಅಧ್ಯಕ್ಷರು ಆಗಿರುವ ಶಾಸಕರಾದ ಪಿ.ಎಂ.ನರೇಂದ್ರಸ್ವಾಮಿ ಅವರು ಹೇಳಿದರು.

ಡಿಸೆಂಬರ್ 6ರಂದು ಬೆಳಗಾವಿಯ ಸುವರ್ಣಸೌಧದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ವಿದ್ಯಾರ್ಥಿನಿಯರ ವಸತಿ ನಿಲಯಗಳಿಗೆ ನರ್ಸ್/ಮಹಿಳಾ ಹೋಮ್ ಗಾರ್ಡ ನೇಮಕ ಮಾಡಿಕೊಳ್ಳಲು, ಕೇಂದ್ರ ಸರ್ಕಾರದ ವಿದ್ಯಾರ್ಥಿ ವೇತನದ ಪಾಲನ್ನು ನೇರವಾಗಿ ಶಿಕ್ಷಣ ಸಂಸ್ಥೆಗಳಿಗೆ ನೀಡಲು, ವಿದ್ಯಾಸಿರಿ ಯೋಜನೆಯನ್ನು ಪರಿಶಿಷ್ಟ ಜಾತಿ ಹಾಗೂ ಪಂಗಡದ ಸಮುದಾಯಕ್ಕೆ ಸಹ ಜಾರಿ ತರಲು, ಅತಿಥಿ ಶಿಕ್ಷಕರನ್ನು ಪಡೆಯುವಾಗ ಮೀಸಲಾತಿ ಕಲ್ಪಿಸುವುದು, ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡದಿದ್ದಲ್ಲಿ ಕ್ರಮ ಕೈಗೊಳ್ಳಲು ಪ್ರತ್ಯೇಕ ಕಾಯಿದೆ ರೂಪಿಸಲು, ಹೊರಗುತ್ತಿಗೆಯಲ್ಲಿ ಮೀಸಲು ನೀಡಲು ಹೊಸ ಕಾಯಿದೆ ರೂಪಿಸುವುದು, ಶಿಕ್ಷಣ ಮತ್ತು ಹಾಸ್ಟೇಲಗಳಿಗೆ ಮೂಲಭೂತ ಸೌಕರ್ಯ ಕೊರತೆಯನ್ನು ಸರಿಪಡಿಸುವುದು, ಸ್ಥಳೀಯ ಸಂಸ್ಥೆಗಳ 24.1 ಅನುದಾನದಲ್ಲಿ ಶಿಕ್ಷಣ ಕ್ಷೇತ್ರಕ್ಕೆ ಮತ್ತು ವಿಶ್ವ ವಿದ್ಯಾನಿಲಯಗಳ ಹಾಸ್ಟೇಲ್‌ಗಳಿಗೆ ಮೂಲಭೂತ ಸೌಕರ್ಯ ಒದಗಿಸುವುದು, ಕಲ್ಯಾಣ ಕರ್ನಾಟಕ ಭಾಗದಲ್ಲಿ ವಾರಕ್ಕೆ 5 ಮೊಟ್ಟೆ ಕೊಡುವುದು, ಹಲವಾರು ಇಲಾಖೆಗಳಲ್ಲಿ ಸಿ ಅಂಡ್ ಆರ್ ನಿಯಮಗಳು, ರೋಸ್ಟರ್ ಮತ್ತು ಜೇಷ್ಠತಾ ಪಟ್ಟಿಗಳನ್ನು ಮಾಡಿಕೊಳ್ಳದಿರುವುದು, ಕಲ್ಯಾಣ ಕರ್ನಾಟಕ ಭಾಗದಲ್ಲಿ ಡಾ.ನಂಜುಂಡಪ್ಪ ವರದಿಯನ್ನು ಪ್ರಸ್ತುತ ಕಾಲಘಟ್ಟದ ಆಧಾರದ ಮೇಲೆ ಅಭಿವೃದ್ಧಿಪಡಿಸುವುದು ಸೇರಿದಂತೆ ನಾನಾ ವಿಷಯಗಳ ಬಗ್ಗೆ ಸಮಿತಿಯು ವರದಿಯಲ್ಲಿ ಶಿಫಾರಸ್ಸು ಮಾಡಿದೆ ಎಂದು ಅವರು ತಿಳಿಸಿದರು.

ಪರಿಶಿಷ್ಟ ಜಾತಿ ಮತ್ತು ಪಂಗಡಗಳ ವಿಶೇಷ ಯೋಜನೆಗಳಡಿ ವಿವಿಧ ಇಲಾಖೆಗಳಿಗೆ ಬಿಡುಗಡೆಯಾದ ಅನುದಾನದ ಸದ್ಬಳಕೆ ಹಾಗೂ ಯೋಜನೆಗಳು ಸಮರ್ಪಕವಾಗಿ ಅನುಷ್ಠಾನಗೊಳ್ಳುತ್ತಿರುವ ಕುರಿತು ಸಮಿತಿಯು ಅಧ್ಯಯನ ನಡೆಸಿ ಸರ್ಕಾರಕ್ಕೆ ವರದಿಯನ್ನು ಮಂಡಿಸಲಾಗುತ್ತಿದೆ ಎಂದು ತಿಳಿಸಿದ ಅವರು, ಪರಿಶಿಷ್ಟ ಜಾತಿ ಮತ್ತು ಪಂಗಡಗಳ ವಿಶೇಷ ಯೋಜನೆಯ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಸಮಿತಿಯಿಂದ ವಿವಿಧ ಇಲಾಖೆಗಳಲ್ಲಿ ಅಧ್ಯಯನ ನಡೆಸಲಾಗಿದೆ. ಈ ಯೋಜನೆಯಡಿ ಬಿಡುಗಡೆ ಮಾಡಲಾದ ಅನುದಾನ್ ಸಮರ್ಪಕವಾಗಿ ಬಳಕೆ ಆಗದೇ ಇರುವುದರ ಬಗ್ಗೆ ಕ್ರಮ ಕೈಗೊಳ್ಳದಿರುವುದು ಸಹ ಕಂಡು ಬಂದಿದೆ ಎಂದರು.

ಪರಿಶಿಷ್ಟ ಜಾತಿ ಮತ್ತು ಪಂಗಡಗಳ ವಿಶೇಷ ಯೋಜನೆಯಡಿ ಹಣ ದುರ್ಬಳಕೆ ಮಾಡಿಕೊಳ್ಳುತ್ತಿರುವ ವಿವಿಧ ನಿಗಮ ಮಂಡಳಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲು ಹಾಗೂ ಬ್ಯಾಕ್‌ಲಾಗ್ ಹುದ್ದೆಗಳ ವಿರುದ್ಧ ಹೊರಗುತ್ತಿಗೆಯಿಂದ ಭರ್ತಿ ಮಾಡುತ್ತಿದ್ದು ಮೀಸಲಾತಿ ಪಾಲಿಸದಿರುವ ಕುರಿತು ಸಹ ಶಿಫಾರಸ್ಸು ಮಾಡಲಾಗಿದೆ. ಪಂಚಾಯತ್ ಸದಸ್ಯರುಗಳಿಗೆ ಜಿಲ್ಲಾವಾರು ತರಬೇತಿ ನೀಡುವುದು, ಜೆಜೆಎಂ ಯೋಜನೆಯಡಿ ಎಸ್ಸಿಪಿ ಟಿಎಸ್ಪಿ ಅನುದಾನ ಬಳಸುತ್ತಿರುವುದು, ಎಲ್ಲಾ ಒಡೆತನ ಯೋಜನೆಯಡಿ ಎಸ್ಸಿ ಎಸ್ಟಿ ಸಮುದಾಯಕ್ಕೆ ಭೂಮಿಯನ್ನು ನೀಡಲು ಅನುದಾನ ಕೊರತೆ ಇರುವುದು, ಎಲ್ಲಾ ನಿಗಮ ಮಂಡಳಿಗಳಲ್ಲಿರುವ ಯೋಜನೆಗಳನ್ನು ಇಂದಿನ ಕಾಲಘಟ್ಟಕ್ಕೆ ಹೊಸ ಯೋಜನೆಗಳ ರೂಪುರೇಷಗಳು, ಎನ್‌ಎಸ್‌ಐಸಿ ಮಾದರಿ ರಾಜ್ಯದ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡದ ಗುತ್ತಿಗೆದಾರರಿಗೆ ಇಎಂಡಿ ವಿನಾಯಿತಿ ನೀಡುವ ಕುರಿತಿ ಕಾಯ್ದೆ ತಿದ್ದುಪಡಿ, ಎಲ್ಲಾ ನಿಗಮ ಮಂಡಳಿಗಳಲ್ಲಿರುವ ಹಳೆಯ ಯೋಜನೆಗಳನ್ನು ಇಂದಿನ ಕಾಲಘಟಕ್ಕೆ ತಕ್ಕಂತೆ ಹೊಸ ರೂಪು ರೇಷೆಗಳನ್ನು ಸಿದ್ಧಪಡಿಸಲು ತಿಳಿಸಲಾಗಿದೆ. ಕಳೆದ 5 ವರ್ಷಗಳಲ್ಲಿ 92 ವಿದ್ಯಾರ್ಥಿಗಳು ಆತ್ಮಹತ್ಯೆ ಮಾಡಿಕೊಂಡಿರುವ ಕುರಿತು ಸಂಪೂರ್ಣ ತನಿಖೆ ಕೈಗೊಳ್ಳಲು ಸಹ ವರದಿಯಲ್ಲಿ ಶಿಫಾರಸ್ಸು ಮಾಡಲಾಗಿದೆ ಎಂದು ಅವರು ತಿಳಿಸಿದರು.

ಶಿಕ್ಷಣ ಮತ್ತು ಹಾಸ್ಟೇಲಗಳಿಗೆ ಮೂಲಭೂತ ಸೌಕರ್ಯಗಳ ಕೊರತೆ ಬಗ್ಗೆ, ವಿವಿಧ ಇಲಾಖೆಗಳಲ್ಲಿ ಎಸ್‌ಸಿಎಸ್‌ಪಿ ಟಿಎಸ್ಪಿ ಅನುದಾನ ಬಳಕೆ ಮಾಡದಿರುವುದು, ಇಂಧನ ಇಲಾಖೆಗೆ ಎಸ್‌ಸಿಎಸ್‌ಪಿ ಟಿಎಸ್ಪಿ ಹೆಚ್ಚುವರಿ ಅನುದಾನ 1.566 ಕೋಟಿಯನ್ನು ಸಮಾಜ ಕಲ್ಯಾಣ/ ಶಿಕ್ಷಣ ಇಲಾಖೆಗೆ ನೀಡಲು, ಹಾಸ್ಟೇಲ್ ವಸತಿ ಶಾಲೆಗಳ ಕಟ್ಟಡಗಳ ನಿರ್ಮಾಣಕ್ಕೆ ಅನುದಾನದ ಕೊರತೆ, ಅಧಿನಿಯಮದ ಪ್ರಕರಣ 7 (ಡಿ) ಇಂದಾಗಿ ಎಸ್‌ಸಿಎಸ್‌ಪಿ ಟಿಎಸ್ಪಿ ಅನುದಾನ ಈ ಸಮುದಾಯಕ್ಕೆ ತಲುಪದಿರುವುದು, 7(ಬಿ) 7 (ಸಿ) ಗಳಿಗೆ ಸೂಕ್ತ ನಿಯಮ ರೂಪಿಸುವುದು, ಸೆಕ್ಷನ್ 24 ಪ್ರಕಾರ ಎಸ್‌ಸಿಎಸ್‌ಪಿ ಟಿಎಸ್ಪಿ ಅನುದಾನ ಬಳಕೆ ಮಾಡದಿರುವವರ ವಿರುದ್ಧ ಕ್ರಮ ವಹಿಸುವುದು, ಪರಿಶಿಷ್ಟ ಜಾತಿ ಮತ್ತು ಪಂಗಡಗಳ ವಿಶೇಷ ಯೋಜನೆಯಡಿ ಆಧುನಿಕ ಶಿಕ್ಷಣದ ಜೊತೆಗೆ ಶಿಕ್ಷಣ ಮತ್ತು ವಸತಿ ನಿಲಯಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಈ ಯೋಜನೆಯಡಿ ಬಳಕೆ ಆಗದೇ ಇರುವ ಅನುದಾವನ್ನು ಬಳಸಿಕೊಳ್ಳಲು ಸಮಿತಿಯು ಶಿಫಾರಸ್ಸು ಮಾಡಿದೆ ಎಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಸಮಿತಿಯ ಸದಸ್ಯರಾದ ಶಾಸಕ ಎಸ್.ಎನ್.ನಾರಾಯಣಸ್ವಾಮಿ ಕೆ.ಎಂ., ವಿಧಾನ ಪರಿಷತ್ ಸದಸ್ಯರಾದ ಅರವಿಂದಕುಮಾರ ಅರಳಿ ಹಾಗೂ ಶಾಂತಾರಾಮ ಬುಡ್ನಸಿದ್ದಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ವಸತಿ ಶಾಲೆ: ಸ್ಥಳೀಯ ವಿದ್ಯಾರ್ಥಿಗಳಿಗೆ ಶೇ.60ರಷ್ಟು ಸ್ಥಾನ ಮೀಸಲು: ಸಚಿವ ದಿನೇಶ್ ಗುಂಡೂರಾವ್

ಬೆಳಗಾವಿ ಸುವರ್ಣವಿಧಾನಸೌಧ : ಕರ್ನಾಟಕ ರಾಜ್ಯ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳ 6ನೇ ತರಗತಿ ಪ್ರವೇಶಕ್ಕೆ ಸ್ಥಳೀಯ ಪ್ರದೇಶದಲ್ಲಿ ವಾಸಿಸುತ್ತಿರುವ, ಆಯಾ ತಾಲ್ಲೂಕಿನ ವಿದ್ಯಾರ್ಥಿಗಳಿಗೆ ಶೇ.60 ರಷ್ಟು ಸ್ಥಾನಗಳನ್ನು ಮೀಸಲಿರಿಸಲು ಸರ್ಕಾರ ಆದೇಶ ಹೊರಡಿಸಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವ ದಿನೇಶ್ ಗುಂಡೂರಾವ್ ಹೇಳಿದರು.

ಬುಧವಾರ ವಿಧಾನಸಭಾ ಅಧಿವೇಶನದಲ್ಲಿ ಶಾಸಕ ಶಿವಲಿಂಗೇಗೌಡ.ಕೆ.ಎಂ ಅವರ ಚುಕ್ಕೇ ಗುರುತಿನ ಪ್ರಶ್ನೆಗೆ ಸಮಾಜ ಕಲ್ಯಾಣ ಇಲಾಖೆ ಸಚಿವರ ಪರವಾಗಿ ಅವರು ಉತ್ತರಿಸಿದರು.

ವಸತಿ ಶಾಲೆಗಳ ಶೇ.60ರಷ್ಟು ಮೀಸಲಾತಿಯು 2024-25ನೇ ಸಾಲಿನಿಂದ ಅನುಷ್ಠಾನಕ್ಕೆ ಬರಲಿದೆ. ಉಳಿದ ಶೇ.40 ರಷ್ಟು ಸ್ಥಾನಗಳನ್ನು ಅಂತರ್ ತಾಲ್ಲೂಕು, ಜಿಲ್ಲೆ, ಹಾಗೂ ರಾಜ್ಯದ ಮೂಲಕ ಭರ್ತಿ ಮಾಡಲಾಗುವುದು ಎಂದು ತಿಳಿಸಿದರು.

ಶಾಸಕ ಶಿವಲಿಂಗೇಗೌಡ ಮಾತನಾಡಿ, ವಸತಿ ಶಾಲೆಗಳ ಪ್ರವೇಶಕ್ಕೆ ಪರೀಕ್ಷೆ ಅಂಕಗಳನ್ನು ಮಾತ್ರ ಪರಿಗಣಿಸಬೇಡಿ. ಬಡತನ ರೇಖೆ ಹಾಗೂ ಓದಿಸಲು ಶಕ್ತರಿಲ್ಲದ ಪೋಷಕರ ಮಕ್ಕಳಿಗೆ ಅವಕಾಶ ನೀಡಬೇಕು. ಸ್ಥಳೀಯ ವಿದ್ಯಾರ್ಥಿಗಳಿಗೆ ಪ್ರವೇಶ ಮೀಸಲಾತಿಯನ್ನು ಶೇ.60 ರಿಂದ ಶೇ.75ಕ್ಕೆ ಹೆಚ್ಚಿಸಬೇಕು ಎಂದು ಸರ್ಕಾರಕ್ಕೆ ಮನವಿ ಮಾಡಿದರು.

# ಅನುದಾನ ರಹಿತ ಶಾಲೆಗಳ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಇಂದು ಹೋರಾಟ



ಬಾಗಲಕೋಟೆ : ಮಾನ್ಯತೆ ಪಡೆದ ಅನುದಾನ ರಹಿತ ಖಾಸಗಿ ಶಾಲೆಗಳ ಸಂಘ, ಕರ್ನಾಟಕದಿಂದ ಅನುದಾನ ರಹಿತ ಶಾಲೆಗಳ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಒಂದು ದಿನದ ಹೋರಾಟವನ್ನು ಡಿ. 11ರಂದು ಬೆಳಗಾವಿಯ ಸುವರ್ಣಸೌಧದ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ ಸಂಘದ ಬಾಗಲಕೋಟೆ ಜಿಲ್ಲಾ ಘಟಕದ ಅಧ್ಯಕ್ಷ ಮಹಾಂತೇಶ್ ಅಂಗಡಿ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, 1995 ರ ನಂತರದ ಎಲ್ಲಾ ಕನ್ನಡ ಮಾಧ್ಯಮ ಶಾಲೆಗಳನ್ನು ಅನುದಾನಕ್ಕೆ ಒಳಪಡಿಸುವುದು, ಖಾಸಗಿ ಶಾಲೆಗಳಲ್ಲಿ ಶೇಕಡ 25 ರಷ್ಟು ಆರ್‌ಟಿಇ ಮಕ್ಕಳ ದಾಖಲಾತಿಯನ್ನು ಮರು ಸ್ಥಾಪಿಸುವ ಕುರಿತು ಹಾಗೂ ಪ್ರಸ್ತುತ ನೀಡುತ್ತಿರುವ 16,000 ರೂಗಳ ವೆಚ್ಚವನ್ನ 35,000 ವರೆಗೆ ಏರಿಸಬೇಕು, ಖಾಸಗಿ ಅನುದಾನ ರಹಿತ ಮಾನ್ಯತೆ ಪಡೆದ ಶಾಲೆಗಳ ನವೀಕರಣವನ್ನು 10 ವರ್ಷಗಳ ಅವಧಿಗೆ ನಿಗದಿ ಪಡಿಸಬೇಕು, ಖಾಸಗಿ ಶಾಲೆಗಳ ನವೀಕರಣ ಸಂದರ್ಭದಲ್ಲಿ ಕೆಲವು ಫೈರ್ ಸೇಫ್ಟಿ ಹಾಗೂ ಕಟ್ಟಡ ಭದ್ರತಾ ಪ್ರಮಾಣದಲ್ಲಿ ರಿಯಾಯಿತಿ ನೀಡಬೇಕು ಎಂಬ ಬೇಡಿಕೆಗಳನ್ನು ಈಡೇರಿಸಬೇಕು ಎಂದು ಆಗ್ರಹಿಸಿ ಸಂಘದ ರಾಜ್ಯಾಧ್ಯಕ್ಷ ಡಾ. ಹಾಲನೂರು ಲೇಪಕ್ಷ ಹಾಗೂ ರಾಜ್ಯ ಘಟಕದ ಪದಾಧಿಕಾರಿಗಳ ನೇತೃತ್ವದಲ್ಲಿ ಒಂದು ದಿನದ ಹೋರಾಟವನ್ನು ಹಮ್ಮಿಕೊಳ್ಳಲಾಗಿದ್ದು, ರಾಜ್ಯದ ಬಹುತೇಕ ಶಿಕ್ಷಣ ಸಂಸ್ಥೆಗಳ ಪದಾಧಿಕಾರಿಗಳು ಈ ಹೋರಾಟದಲ್ಲಿ ಪಾಲ್ಗೊಂಡು ಸಂಬಂಧಿಸಿದ ಮಂತ್ರಿಗಳಿಗೆ ಅಧಿಕಾರಿಗಳ ಗಮನ ಸೆಳೆದು ಮನವಿ ಸಲ್ಲಿಸಲಾಗುವುದು. ಬಾಗಲಕೋಟೆ ಜಿಲ್ಲೆಯ ಎಲ್ಲಾ ಖಾಸಗಿ ಶಾಲೆಗಳ ಪದಾಧಿಕಾರಿಗಳು ಹೋರಾಟದಲ್ಲಿ ಪಾಲ್ಗೊಂಡು ಹೋರಾಟವನ್ನು ಯಶಸ್ವಿಗೊಳಿಸಬೇಕು ಎಂದು ಸಂಘದ ರಾಜ್ಯ ಸಂಘಟನಾ ಕಾರ್ಯದರ್ಶಿ ಸತೀಶ್ ಪಾಟೀಲ, ಜಿಲ್ಲಾ ಘಟಕದ ಅಧ್ಯಕ್ಷ ಮಹಾಂತೇಶ್ ಅಂಗಡಿ ಕೋರಿದ್ದಾರೆ.

# ಪತ್ರಿಕೆಗಳಿಗೆ ಜಾಹೀರಾತು ಸಂಸ್ಥೆಯಿಂದ ವೆಚ್ಚ ಪಾವತಿಸದಿದ್ದರೆ ಕ್ರಮ ವಿಧಾನ ಪರಿಷತ್ ಸದಸ್ಯರ ಪಿ.ಎಚ್. ಪೂಜಾರ ಪ್ರಶ್ನೆಗೆ ಉತ್ತರ



ಬೆಳಗಾವಿ : ಜಾಹೀರಾತು ವೆಚ್ಚವನ್ನು 60 ದಿನಗಳ ಒಳಗಾಗಿ ಪತ್ರಿಕೆಗಳಿಗೆ ಪಾವತಿ ಸದಿದ್ದಲ್ಲಿ ಅಂತಹ ಜಾಹೀ ರಾತು ಸಂಸ್ಥೆಗಳ ಐಎನ್‌ಎಸ್ ಮಾನ್ಯತೆ ರದ್ದುಗೊಳಿಸಲಾಗುವುದು ಎಂದು ಸಿಎಂ ಸಿದ್ದ ರಾಮಯ್ಯ ಲಿಖಿತ ಉತ್ತರ ನೀಡಿದ್ದಾರೆ.

ಬೆಳಗಾವಿ ಅಧಿವೇಶನದಲ್ಲಿ ವಿಧಾನ ಪರಿಷತ್ ಸದಸ್ಯ ಪಿ.ಎಚ್.ಪೂಜಾರ ಅವರ ಪ್ರಶ್ನೆಗೆ ಸಿಎಂ ಉತ್ತರಿಸಿದ್ದಾರೆ.

ಪತ್ರಿಕೆಯವರಿಗೆ ವರ್ಷಗಳಾದರೂ ಜಾಹೀರಾತು ವೆಚ್ಚ ಸಂದಾಯವಾಗಿಲ್ಲ. ಪತ್ರಿಕೆಯವರು ನಿರಂತರವಾಗಿ ತೊಂದರೆಯನ್ನು ಅನುಭವಿಸುತ್ತಿದ್ದಾರೆ. ಅಲ್ಲದೇ ಜಾಹೀರಾತುಗಳನ್ನು ನೇರವಾಗಿ ವಾರ್ತಾ ಇಲಾಖೆಯ ಮುಖಾಂತರ ಪತ್ರಿಕೆಗಳಿಗೆ ನೀಡಬೇಕು.

ಏಜನ್ಸಿಯವರಿಗೆ 15% ಕಮಿಷನ್ ಶುಲ್ಕವನ್ನು ಪತ್ರಿಕೆಯವರು ನೀಡುವುದನ್ನು ತಪ್ಪಿಸಬೇಕು. ವಾರ್ತಾ ಇಲಾಖೆಯ ಮೂಲಕ ಜಾಹೀರಾತುಗಳನ್ನು ಪತ್ರಿಕೆಗಳಿಗೆ ನೀಡಿದರೆ ಅನುಕೂಲವಾಗುತ್ತದೆ ಎಂದು ಪೂಜಾರ ಪ್ರಶ್ನಿಸಿದ್ದಾರೆ.

ಜಾಹೀರಾತು ಸಂಸ್ಥೆಗಳು ಹಣ ಪಾವತಿಸದಿದ್ದರೆ ಅಂತಹವರಿಗೆ ನೋಟಿಸ್ ನೀಡಿ ನೊಂದಾಯಿತ ಆಯ್ಕೆ ಪಟ್ಟಿಯಿಂದ ಕೈ ಬಿಡಲಾಗುವುದು. ಹೊಸ ಜಾಹೀರಾತು ನೀತಿಯನ್ನು ತರುವ ವಿಷಯ ಸರ್ಕಾರದ ಪರಿಶೀಲನೆಯಲ್ಲಿದ್ದು, ಜಾಹೀರಾತು ನೀತಿಯನ್ನು ಹೊರಡಿಸುವ ಸಂದರ್ಭದಲ್ಲಿ ಪತ್ರಿಕೆಗಳಿಗೆ ಜಾಹೀರಾತು ಶುಲ್ಕ, ಪಾವತಿ ವಿಳಂಬ, ತೊಂದರೆ ತಪ್ಪಿಸುವ ವಿಷಯವನ್ನು ಗಮನದಲ್ಲಿಟ್ಟುಕೊಳ್ಳ ಲಾಗುವುದು ಎಂದು ಸಿಎಂ ಸಿದ್ದರಾಮಯ್ಯ ಉತ್ತರಿಸಿದ್ದಾರೆ.

# ಭೂಸ್ವಾಧೀನ ಜಮೀನಿನಲ್ಲಿ ಬಿತ್ತನೆ ಮಾಡದಿರಲು ಸೂಚನೆ

ಬಾಗಲಕೋಟೆ : ನವನಗರ ಯ್ಯೂನಿಟ್ 3ರ ನಿರ್ಮಾಣಕ್ಕಾಗಿ ವಿವಿಧ ಕಾಮಗಾರಿಗಳು ಪ್ರಾರಂಭವಾಗಿ, ಭೂಸ್ವಾಧಿನವಾದ ಜಮೀನುಗಳನ್ನು ಯ್ಯೂನಿಟ್–3 ನಿರ್ಮಾಣವನ್ನು ಗುತ್ತಿಗೆದಾರರಿಗೆ ಹಸ್ತಾಂತರಿಸಲಾಗಿರುತ್ತದೆ. ಸ್ವಾಧಿನವಾದ ಜಮೀನುಗಳಲ್ಲಿ ಪ್ರಸ್ತುತ ಇರುವ ಕಬ್ಬು ಬೆಳೆ ಕಟಾವು ಮಾಡಿ ರೈತರು ಜಮೀನು ಖಾಲಿ ಮಾಡಿ ಕೊಡಬೇಕು ಹಾಗೂ ಯಾವುದೇ ಬಿತ್ತನೆ, ಕಬ್ಬಿನ ಕುಳೆ ಬೆಳೆಸಬಾರದು. ಮುಂದೆ ಕಾಮಗಾರಿ ನಿರ್ವಹಿಸುವಾಗ ಉದ್ಭವಿಸಬಹುದಾದ ಬೆಳೆ ಹಾನಿಗಳಿಗೆ ಗುತ್ತಿಗೆದಾರರು ಅಥವಾ ಪ್ರಾಧಿಕಾರವು ಯಾವುದೇ ಜವಾಬ್ದಾರಿಯಾಗಿರುವುದಿಲ್ಲ ಎಂದು ಬಾಗಲಕೋಟೆ ಪಟ್ಟಣ ಅಭಿವೃದ್ಧಿ ಪ್ರಾಧಿಕಾರದ ಮುಖ್ಯ ಇಂಜಿನೆಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಧರ್ಮಗುರುಗಳ ವಿರುದ್ಧ ಆಧಾರ ರಹಿತ ಆರೋಪ: ಯತ್ನಾಳ ಬೇಷರತ್ ಕ್ಷಮೆಗೆ ಅಹಿಂದ ಮುಖಂಡರ ಆಗ್ರಹ

# ಯತ್ನಾಳ ಆರೋಪ ಸಾಬೀತು ಪಡಿಸಿದರೆ ದೇಶ ತೊರೆಯಲು ಸಿದ್ಧ: ಇಲ್ಲದಿದ್ದರೆ ಯತ್ನಾಳ ಪಾಕಿಸ್ತಾನಕ್ಕೆ ಹೋಗುವರೇ: ಸೈಯದ್ ತನ್ವೀರ್ ಹಾಶ್ಮಿ ಸವಾಲು

ವರದಿ:ಲಾಲಸಾಬ ಸವಾರಗೋಳ

ವಿಜಯಪುರ: ತಮಗೆ ಅಧಿಕಾರ ಸಿಗದಿರುವುದರಿಂದ ತಮ್ಮ ರಾಜಕೀಯ ಸ್ವಾರ್ಥಕ್ಕಾಗಿ ಧರ್ಮ ಗುರುಗಳ ಬಗ್ಗೆ ಆಧಾರ ರಹಿತ ಆರೋಪ ಮಾಡುತ್ತಿರುವ ಬಿಜೆಪಿ ಶಾಸಕ ಬಸನಗೌಡ ಪಾಟೀಲ ಯತ್ನಾಳ ಕೂಡಲೇ ಬೇಷರತ್ ಕ್ಷಮೆ ಯಾಚಿಸಬೇಕು ಎಂದು ಅಹಿಂದ್ ನಾಯಕರು ಅಗ್ರಹಿಸಿದ್ದಾರೆ.





ಗುರುವಾರ ನಗರದಲ್ಲಿ ಜಂಟಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅಹಿಂದ ಮುಖಂಡರಾದ ಎಸ್. ಎಂ. ಪಾಟೀಲ ಗಣಿಹಾರ, ಎಂ. ಸಿ. ಮುಲ್ಲಾ ಸಾಂವಿಧಾನಿಕವಾಗಿ ಶಾಸಕ ಸ್ಥಾನದಲ್ಲಿರುವ ಬಸನಗೌಡ ಪಾಟೀಲ ಯತ್ನಾಳ್ ಅವರು ಸಮಾಜದಲ್ಲಿ ಶಾಂತಿ ಕದಡುವದಕ್ಕಾಗಿ ಪದೇ ಪದೇ ಮುಸ್ಲಿಮರ ವಿರುದ್ಧ ದ್ವೇಷದ ಹೇಳಿಕೆ ಕೊಡುತ್ತಲೇ ಬರುತ್ತಿದ್ದಾರೆ. ಇದೀಗ ಇಸ್ಲಾಂ ಧರ್ಮಗುರುಗಳ ವಿರುದ್ಧ ಐ.ಎಸ್.ಐ. ನಂಟಿದೆ; ಭಯೋತ್ಪಾದಕರ ಸಂಪರ್ಕ ಇದೆ; ದೇಶದ್ರೋಹದ ಕೆಲಸ ಮಾಡಲು ವಿದೇಶದಿಂದ ಹಣ ಬರುತ್ತಿದೆ ಎಂದೆಲ್ಲ ಆಧಾರ ರಹಿತ ಆರೋಪ ಮಾಡುತ್ತಿದ್ದಾರೆ. ಹೀಗಾಗಿ ಸರ್ಕಾರ ಕೂಡಲೇ ಈ ಬಗ್ಗೆ ಸಮಗ್ರ ತನಿಖೆ ನಡೆಸಬೇಕು ಎಂದು ಆಗ್ರಹಿಸಿದರು.

ಶಾಸಕ ಬಸನಗೌಡ ಪಾಟೀಲ ಯತ್ನಾಳ ತಾವು ಇಸ್ಲಾಂ ಧರ್ಮ ಗುರುಗಳ ವಿರುದ್ಧ ಮಾಡಿರುವ ಆರೋಪ ಸಾಬೀತು ಪಡಿಸಬೇಕು. ಇಲ್ಲವೇ ತನ್ವೀರ ಪೀರಾ ಅವರು ನೀಡಿರುವ ಸವಾಲು ಸ್ವೀಕರಿಸಿ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿ, ದೇಶ ತೊರೆಯಬೇಕು ಎಂದು ಎಸ್. ಎಂ. ಪಾಟೀಲ ಆಗ್ರಹಿಸಿದರು.

ನನ್ನ ವಿರುದ್ಧ ಮಾಡಿರುವ ಆರೋಪ ಸಾಬೀತು ಮಾಡಿದಲ್ಲಿ ನಾನು ದೇಶ ತೊರೆಯುವುದಾಗಿ ನೀಡಿರುವ ತನ್ವೀರ ಪೀರಾ ಅವರ ಸವಾಲು ಸ್ವೀಕರಿಸಬೇಕು ಎಂದು ಆಗ್ರಹಿಸಿದರು.

ಯತ್ನಾಳ ಹೇಳಿಕೆ ಆಧಾರ ರಹಿತವಾಗಿರುವ ಕಾರಣ ಕೂಡಲೇ ಸರ್ಕಾರ ಸಮಗ್ರ ತನಿಖೆ ನಡೆಸಿ, ಯತ್ನಾಳ ಅವರನ್ನು ಭಾರತದಿಂದ ಗಡಿಪಾರು ಮಾಡಬೇಕು ಎಂದು ಆಗ್ರಹಿಸಿದರು.

ತನ್ವೀರ ಪೀರಾ ಅವರೊಂದಿಗೆ ಯತ್ನಾಳ ವ್ಯವಹಾರಿಕ ಬಾಂಧವ್ಯ ಹೊಂದಿದ್ದಾರೆ. ಈ ಹಿಂದೆ ಮುಸ್ಲಿಮರ ಮತಗಳಿಂದಲೇ ಆಯ್ಕೆ ಆಗಿದ್ದ ಯತ್ನಾಳ, ಜೆ.ಡಿ.ಎಸ್. ಪಕ್ಷದಿಂದ ಹೊರಬಂದ ಬಳಿಕ ಮುಸ್ಲಿಮರ ವಿರುದ್ಧ ದ್ವೇಷದ ಹೇಳಿಕೆ ನೀಡುತ್ತ, ಸಮಾಜ ಒಡೆಯುವ, ಸಮಾಜದಲ್ಲಿ ಅಶಾಂತಿ ಮೂಡಿಸುವ ಕೆಲಸದಲ್ಲಿ ತೊಡಗಿದ್ದಾರೆ ಎಂದು ಕಿಡಿಕಾರಿದರು.

ಹುಬ್ಬಳ್ಳಿಯಲ್ಲಿ ನಡೆದ ಮೌಲ್ವಿಗಳ ಸಮಾರಂಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತನ್ವೀರ ಪೀರಾ ಅವರೊಂದಿಗೆ ವೇದಿಕೆ ಹಂಚಿಕೊಂಡಿದ್ದಾರೆ. ತನ್ವೀರ ಪೀರಾ ಅವರು ಐ.ಎಸ್.ಐ. ನಂಟು ಹೊಂದಿದ್ದಾರೆ ಎಂದು ಸಾಕ್ಷ್ಯ ರಹಿತ ಆರೋಪ ಮಾಡಿದ್ದಾರೆ. ತನ್ವೀರ ಪೀರಾ ಅವರು ದೇಶದ್ರೋಹದ ಕೃತ್ಯದಲ್ಲಿ ಪಾಲ್ಗೊಂಡಿದ್ದರೆ ದೇಶದ ಹಲವು ಕಡೆಗಳಲ್ಲಿ ತನ್ವೀರ್ ಪೀರಾ ಸೇರಿದಂತೆ ಮುಸ್ಲೀಂ ಮೌಲ್ವಿ, ಧರ್ಮಗುರುಗಳೇ ಆಯೋಜಿಸಿದ್ದ ಸಮಾವೇಶದಲ್ಲಿ ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಸಚಿವರಾದ ಅಮಿತ್ ಶಹಾ, ನಿತಿನ್ ಗಡ್ಕರಿ, ಹಿಂದೂ ಧರ್ಮದ ಗುರುಗಳು ಕೂಡ ಪಾಲ್ಗೊಂಡಿದ್ದಾರೆ. ಹಾಗಾದರೆ ಇವರೆಲ್ಲ ದೇಶದ್ರೋಹಿಗಳೇ, ಈ ಬಗ್ಗೆ ತನಿಖೆ ನಡೆಸಬಾರದೇಕೆ ಎಂದು ಗಣಿಹಾರ ಪ್ರಶ್ನಿಸಿದರು.

ಯತ್ನಾಳ ಜೆಡಿಎಸ್ ಪಕ್ಷದಲ್ಲಿ ಇದ್ದಾಗ ನನ್ನ ಮನೆಯಲ್ಲಿ ತನ್ವೀರ ಪೀರಾ ಅವರೊಂದಿಗೆ ಊಟ ಮಾಡಿದ್ದಾರೆ. ಸ್ವಯಂ ತನ್ವೀರ್ ಪೀರಾ ಅವರನ್ನು ನಾನೇ ಯತ್ನಾಳ ಅವರ ಮನೆಗೆ ಕರೆದೊಯ್ದಾಗ ಜೊತೆಯಲ್ಲಿ ಕುಳಿತು ಊಟ ಮಾಡಿದ್ದಾರೆ. ಇದನ್ನು ಯತ್ನಾಳ ಮರೆತಿದ್ದಾರೆ ಎಂದು ಎಂ. ಸಿ. ಮುಲ್ಲಾ ಕುಟುಕಿದರು.

ಹದಿನೇಳು ಪ್ರಕರಣ ಎದುರಿಸುತ್ತಿರುವ ಯತ್ನಾಳ ವಿರುದ್ಧ ಸರ್ಕಾರ ರೌಡಿಶೀಟರ್ ದಾಖಲು ಮಾಡಬೇಕು ಎಂದು ಆಗ್ರಹಿಸಿದರು. ತನ್ವೀರ ಪೀರಾ ಅವರು ಹದಿಮೂರು ವರ್ಷಗಳ ಹಿಂದೆ ತಮ್ಮ ಪೀಠ ಪರಂಪರೆಯ ಬಾಂಧವ್ಯ ಇರುವ ಬಾಗ್ದಾದ್‌ಗೆ ಭೇಟಿ ನೀಡಿದ್ದರು. ಆಗ ನಗರಸಭೆ ಅಧ್ಯಕ್ಷರಾಗಿದ್ದ ಇಕ್ಬಾಲ್ ಬೇಪಾರಿ ಸೇರಿದಂತೆ ಹಲವು ಭಕ್ತರು ಬಾಗ್ದಾದ್ ಗೆ ಹೋಗಿದ್ದರು. ಹಾಗಂತ ವಿದೇಶದ ಧಾರ್ಮಿಕ ಕೇಂದ್ರಗಳಿಗೆ ಭೇಟಿ ನೀಡಿದ ಮಾತ್ರಕ್ಕೆ ಐ.ಎಸ್.ಐ. ನಂಟು, ಭಯೋತ್ಪಾದಕರ ಸಂಪರ್ಕ ಇದೆ ಎಂದು ಯತ್ನಾಳ ಅವರು ಧರ್ಮಗುರು ತನ್ವೀರ ಪೀರಾ ಅವರ ವಿರುದ್ಧ ಆಧಾರ ರಹಿತ ಆರೋಪ ಮಾಡುತ್ತಿದ್ದಾರೆ ಎಂದು ಕಿಡಿ ಕಾರಿದರು.

ದಶಕದ ಹಿಂದೆ ಯತ್ನಾಳ ಅವರೇ ಪಾಕಿಸ್ತಾನ ಧ್ವಜ ಹಾರಾಟ ಪ್ರಕರಣ ನಡೆಸಿದ್ದರು. ಆಗ ಬಿಜೆಪಿ ಸರ್ಕಾರ ಪ್ರಕರಣವನ್ನು ಮುಚ್ಚಿಹಾಕಿತ್ತು. ಸಿದ್ಧರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಪಾಕಿಸ್ತಾನ ಧ್ವಜ ಹಾರಾಟ ಪ್ರಕರಣದ ಮರು ತನಿಖೆ ನಡೆಸಬೇಕು ಎಂದು ಎಂ. ಸಿ. ಮುಲ್ಲಾ ಆಗ್ರಹಿಸಿದರು.

ರಾಜಕೀಯ ಅಧಿಕಾರ ಸಿಗದ ಕಾರಣಕ್ಕೆ ಹತಾಶ ಹೇಳಿಕೆ ನೀಡುತ್ತಿರುವ ಯತ್ನಾಳ ಮಾನಸಿಕ ಸ್ಥಿಮಿತ ಕಳೆದುಕೊಂಡಿದ್ದಾರೆ. ಕೂಡಲೇ ಯತ್ನಾಳ ಅವರನ್ನು ಮಂಪರು ಪರೀಕ್ಷೆಗೆ ಒಳಪಡಿಸಬೇಕು ಎಂದು ಅಹಿಂದ ಮುಖಂಡ ಎಂ. ಸಿ. ಮುಲ್ಲಾ ಆಗ್ರಹಿಸಿದರು.

ಕನ್ನಡ ಪರ ಸಂಘಟನೆಗಳು, ಪ್ರಗತಿಪರ ಚಿಂತಕರು, ಸ್ವಾತಂತ್ರ್ಯ ಹೋರಾಟಗಾರರು, ಹಿಂದೂ ಧರ್ಮ ಗುರುಗಳು, ಧಾರ್ಮಿಕ ನಾಯಕರ ವಿರುದ್ಧ ಆಧಾರ ರಹಿತವಾಗಿ ದೇಶದ್ರೋಹದ ಆಪಾದನೆ ಮಾಡುತ್ತಲೇ ಬರುತ್ತಿದ್ದಾರೆ. ಹೀಗಾಗಿ ಸಮಾಜದಲ್ಲಿ ಅಶಾಂತಿ ಸೃಷ್ಟಿಸುವ ಹೇಳಿಕೆ, ವರ್ತನೆ ತೋರುತ್ತಿರುವ ಶಾಸಕ ಬಸನಗೌಡ ಪಾಟೀಲ ಯತ್ನಾಳ ಕೂಡಲೇ ಬೇಷರತ್ತಾಗಿ ಕ್ಷಮೆ ಕೇಳಬೇಕು. ಸರ್ಕಾರ ಕೂಡ ಕೂಡಲೇ ಯತ್ನಾಳ ಅವರ ವಿಚಾರಣೆ ನಡೆಸಬೇಕು ಎಂದು ಆಗ್ರಹಿಸಿದರು.

ಅಹಿಂದ ಮುಖಂಡರಾದ ಸೋಮನಾಥ ಕಳ್ಳಿಮನಿ, ನಾಗರಾಜ ಲಂಬು, ರಫೀಕ್ ಅಹ್ಮದ್ ಟಪಾಲ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಬೃಹತ್ ಉಚಿತ ಆರೋಗ್ಯ ತಪಾಸಣಾ ಶಿಬಿರ

## ನಿಸರ್ಗ ಚಿಕಿತ್ಸೆಯಿಂದ ರೋಗಮುಕ್ತ ಜೀವನ: ಡಾ। ಬಸವಾನಂದ ಸ್ವಾಮಿಜಿ





ಮಹಾಲಿಂಗಪುರ: ಪಂಚತತ್ವಗಳು ಮತ್ತು ಆತ್ಮ ಈ ಆರು ತತ್ವಗಳು ಮತ್ತು ಅವುಗಳ ಸ್ವರೂಪ–ಕಾರ್ಯಗಳನ್ನು ಅರಿತುಕೊಂಡು, ನಿರಂತರ ಯೋಗ, ಭಕ್ತಿ, ಉಪವಾಸ, ಆತ್ಮವಿಶ್ವಾಸಗಳ ಮೂಲಕ ನಿಸರ್ಗ ಚಿಕಿತ್ಸೆಯಿಂದಲೇ ಮನುಷ್ಯನು ರೋಗಮುಕ್ತ ಜೀವನ ನಡೆಸಲು ಸಾಧ್ಯವಿದೆ ಎಂದು ಧಾರವಾಡ ಮನಗುಂಡಿಯ ಗುರುಬಸವ ಮಹಾಮನೆಯ ಡಾ। ಬಸವಾನಂದ ಮಹಾಸ್ವಾಮಿಜಿ ಹೇಳಿದರು.

ಪಟ್ಟಣದ ಸಿದ್ಧಾರೂಢ ಬ್ರಹ್ಮವಿದ್ಯಾಶ್ರಮದಲ್ಲಿ ಪುರಸಭೆ ಮಾಜಿ ಉಪಾಧ್ಯಕ್ಷ ಚನ್ನಬಸು ಹುರಕಡ್ಲಿ, ಹಾಲಿ ಸದಸ್ಯೆ ಸವಿತಾ ಹುರಕಡ್ಲಿ ಅವರು ಹಮ್ಮಿಕೊಂಡಿದ್ದ ಬೃಹತ್ ಉಚಿತ ಆರೋಗ್ಯ ತಪಾಸಣೆ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದ ಅವರು ಪ್ರತಿವರ್ಷ ವೈದ್ಯರು, ಆಸ್ಪತ್ರೆಗಳ ಸಂಖ್ಯೆ ಹೆಚ್ಚಾಗುತ್ತಿದೆ ವಿನಹ: ರೋಗಿಗಳ ಸಂಖ್ಯೆ ಇಳಿಮುಖವಾಗುತ್ತಿಲ್ಲ. ಎಲ್ಲರೂ ಉಪವಾಸ ಮತ್ತು ನಿಸರ್ಗ ಚಿಕಿತ್ಸೆಯತ್ತ ಗಮನ ಹರಿಸುವದು ಅವಶ್ಯಕ. ಕಳೆದ 15 ವರ್ಷಗಳಿಂದ ಉಚಿತ ಆರೋಗ್ಯ ಶಿಬಿರ, ಸಾಮೂಹಿಕ ವಿವಾಹ, ಸಾಮಾಜಿಕ ಹೋರಾಟಗಳ ಮೂಲಕ ನಿರಂತರ ಜನಸೇವೆ ಸಲ್ಲಿಸುತ್ತಿರುವ ಚನಬಸು ಹುರಕಡ್ಲಿಯವರ ಸಾಮಾಜಿಕ ಸೇವಾಕಾರ್ಯವು ಶ್ಲಾಘನೀಯ. ಉಳ್ಳವರು ಸಮಾಜದಲ್ಲಿನ ನಿರ್ಗತಿಕರು, ಬಡವರು, ಅಂಗವಿಕಲರು, ರೋಗಿಗಳು ಸೇರಿದಂತೆ ಅವಶ್ಯಕತೆ ಇರುವವರಿಗೆ ಮಾಡುವ ಆಹಾರ, ಬಟ್ಟೆ, ಆರೋಗ್ಯ ಸೇರಿದಂತೆ ತ್ರಿವಿಧ ಸೇವೆಯೇ ಭಗವಂತನಿಗೆ ಸಲ್ಲಿಸುವ ನಿಜವಾದ ಸೇವೆಯಾಗಿದೆ ಎಂದರು.

ಹೊನ್ನಾವರದ ಗಿಡಮೂಲಿಕೆ ಚಿಕಿತ್ಸಕ ಪ್ರಕಾಶ ಪಿ.ರಾಯಸ್ ಮಾತನಾಡಿ ಅಸಂಖ್ಯಾತ ವನಸ್ಪತಿಯುಳ್ಳ ಪ್ರಪಂಚದ ಏಕೈಕ ದೇಶ ನಮ್ಮ ಭಾರತ. ಮಾರಕ ಕ್ಯಾನ್ಸರ್ ಸೇರಿದಂತೆ ಎಲ್ಲಾ ಖಾಯಿಲೆಗಳಿಗೆ ವನಸ್ಪತಿ ಔಷಧ ನೀಡುತ್ತೇವೆ. ಮನುಷ್ಯ ಇಂದು ಮೊದಲಿನ ಸಂಸ್ಕೃತಿ ಮರೆತು ಹಲವು ರೋಗಗಳಿಗೆ ತುತ್ತಾಗುತ್ತಿದ್ದಾನೆ ಎಂದರು.

ಬಸವನಬಾಗೇವಾಡಿ ಸಾಹಿತಿ ಅಶೋಕ ಹಂಚಲಿ ಮಾತನಾಡಿ ಕಾಯ ಅಳಿದರು ಮಾಡಿದ ಕಾರ್ಯ ಉಳಿಯುತ್ತದೆ ಎಂಬ ಮಾತಿನಂತೆ ಆರೋಗ್ಯ ಸೇವೆ ನೀಡುತ್ತಿರುವ ಚನಬಸು ಹುರಕಡ್ಲಿಯವರು ಕಳೆದ 15 ವರ್ಷಗಳಿಂದ ನಿರಂತರ ಸಾಮಾಜಿಕ ಸೇವಾ ಕಾರ್ಯಗಳಲ್ಲಿ ತೊಡಗಿಸಿಕೊಂಡು ಅಂಗವಿಕಲರಿಗೆ ಕೃತಕ ಕೈಕಾಲು ಜೋಡಣೆ, ರಕ್ತದಾನ, ದಂತ ಚಿಕಿತ್ಸೆ, ನೇತ್ರ ತಪಾಸಣೆ ಮತ್ತು ಶಸ್ತ್ರ ಚಿಕಿತ್ಸೆ ಶಿಬಿರಗಳನ್ನು ಆಯೋಜಿಸಿದ್ದು ಶ್ಲಾಘನೀಯ ಕಾರ್ಯವಾಗಿದೆ ಎಂದರು.

ಸಿದ್ಧಾರೂಢ ಬ್ರಹ್ಮವಿದ್ಯಾಶ್ರಮದ ಸಹಜಾನಂದ ಸ್ವಾಮಿಜಿ ದಿವ್ಯ ಸಾನಿಧ್ಯವಹಿಸಿ ಮಾತನಾಡಿದರು. ಪುರಸಭೆ ಮುಖ್ಯಾಧಿಕಾರಿ ಈರಣ್ಣ ದಡ್ಡಿ, ಡಾ.ಎಂ.ಎಚ್.ನಾಯ್ಕರ್, ವಿಜಯ ಡೋಮನಾಳ, ಗಂಗಾಧರ ಅಂಗಡಿ ಅತಿಥಿಗಳಾಗಿ ಭಾಗವಹಿಸಿದ್ದರು.

ರಾಷ್ಟ್ರಪ್ರಶಸ್ತಿ ಪಡೆದ ಶಿಕ್ಷಕಿ ಸಪನಾ ಅನಿಗೋಳ ಅವರನ್ನು ಸತ್ಕರಿಸಲಾಯಿತು.

ಉಚಿತ ಆರೋಗ್ಯ ಶಿಬಿರ : ಸಿ.ಎಂ.ಹುರಕಡ್ಲಿ ಫೌಂಡೇಶನ್ ವತಿಯಿಂದ ಹಮ್ಮಿಕೊಂಡ ಬೃಹತ್ ಉಚಿತ ಆರೋಗ್ಯ ಶಿಬಿರದಲ್ಲಿ ವಿವಿಧ ಭಾಗಗಳಿಂದ ಆಗಮಿಸಿದ್ದ 600ಕ್ಕೂ ಅಧಿಕ ಜನರ ಆರೋಗ್ಯ ತಪಾಸಣೆಗೆ ಮಾಡಲಾಯಿತು. ಇದರಲ್ಲಿ 50 ಅಂಗವಿಕಲರಿಗೆ ಕೃತಕ ಕೈಕಾಲು ಜೋಡಣೆ, 50 ಜನರಿಗೆ ಉಚಿತ ಹಲ್ಲಿನ ಸಟ್ ವಿತರಣೆ, 55 ಜನರಿಂದ ರಕ್ತದಾನ, 65 ಜನರಿಗೆ ಉಚಿತ ಕಣ್ಣಿನ ಶಸ್ತ್ರ ಚಿಕಿತ್ಸೆ, 5 ಜನರಿಗೆ ಉಚಿತ ಕ್ಯಾನ್ಸರ್ ಔಷಧ ವಿತರಿಸಲಾಯಿತು. ಧಾರವಾಡದ ಬಸವಾನಂದ ಸ್ವಾಮಿಜಿ ಯಶಸ್ವಿ 100ನೇ ಬಾರಿಗೆ ರಕ್ತದಾನ ಮಾಡಿ ಗಮನ ಸೆಳೆದರು.

ಚನಬಸು ಹುರಕಡ್ಲಿ, ಸವಿತಾ ಹುರಕಡ್ಲಿ, ಸೌಮ್ಯ ಹುರಕಡ್ಲಿ, ಬಸವರಾಜ ಹುರಕಡ್ಲಿ, ಸಿದ್ದು ಧಡೂತಿ, ಶಿವಾನಂದ ಬಿದರಿ, ಎಂ.ಡಿ.ಆನಂದ, ಪ್ರಕಾಶ ಬಾಡನವರ, ಮಹೇಶ ಇಟಕನ್ನವರ, ಶಿವು ನೇಗಿನಾಳ, ಮಹಾನಂದಾ ಗುಣಾರಿ, ಅರುಣಾ ಮೂಕಾಶಿ ಸೇರಿದಂತೆ ಹಲವರು ಇದ್ದರು.

## ಕೊಬ್ಬರಿ ಪ್ರೋತ್ಸಾಹಧನ ಹೆಚ್ಚಳಕ್ಕೆ ಕ್ರಮ; ಕೇಂದ್ರ ಸರಕಾರ ನಫೇಡ್ ಮೂಲಕ ಎಂಎಸ್‌ಪಿ ಅಡಿ ಕೊಬ್ಬರಿ ಖರೀದಿ ಪ್ರಾರಂಭಿಸಿಲಿ: ಸಚಿವ ಶಿವಾನಂದ ಪಾಟೀಲ

ಸುವರ್ಣಸೌಧ ಬೆಳಗಾವಿ : ರಾಜ್ಯ ಸರಕಾರವು ತೆಂಗು ಬೆಳೆಗಾರರಿಗೆ ಸಹಾಯ ಮಾಡಲು, ಕೇಂದ್ರದ ಬೆಂಬಲ ಬೆಲೆ ಯೋಜನೆಯಡಿ ನೀಡುವ ದರದೊಂದಿಗೆ ಕೊಬ್ಬರಿ ಖರೀದಿಗೆ ಈಗಾಗಲೇ 1,225 ರೂ.ಗಳನ್ನು ಪ್ರೋತ್ಸಾಹಧನ ನೀಡುತ್ತಿದೆ ಎಂದು ಜವಳಿ, ಕಬ್ಬು ಅಭಿವೃದ್ಧಿ, ಸಕ್ಕರೆ ಮತ್ತು ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ ಅವರು ವಿಧಾನಸಭೆಯಲ್ಲಿ ತಿಳಿಸಿದರು.

ಶೂನ್ಯವೇಳೆಯಲ್ಲಿ ಶಾಸಕ ಶಿವಲಿಂಗೆಗೌಡ, ಎಚ್.ಡಿ.ರೇವಣ್ಣ ಸೇರಿದಂತೆ ವಿವಿಧ ಶಾಸಕರು ಕೊಬ್ಬರಿ ಖರೀದಿ ಬೆಲೆ ಬಹಳಷ್ಟು ಕಡಿಮೆ ಆಗಿರುವುದರಿಂದ ಸರಕಾರಗಳು ರೈತರ ನೆರವಿಗೆ ಬರಬೇಕೆಂದು ವಿಷಯ ಪ್ರಸ್ತಾಪಿಸಿದ್ದರಿಂದ ಅವರಿಗೆ ಉತ್ತರಿಸಿ, ಮಾತನಾಡಿದರು.

ನಫೇಡ್ ಸಂಸ್ಥೆ ಕೇಂದ್ರ ಸರಕಾರದ ಬೆಂಬಲ ಬೆಲೆ ಯೋಜನೆಯಡಿ ಕೊಬ್ಬರಿ ಖರೀದಿ ಕಾರ್ಯವನ್ನು ಸ್ಥಗಿತಗೊಳಿಸಿರುವುದರಿಂದ ರೈತರಿಗೆ ತೊಂದರೆ ಆಗಿದೆ. ಮರು ಆರಂಭಿಸಲು ಕೇಂದ್ರ ಸರಕಾರಕ್ಕೆ ಪತ್ರ ಬರೆಯಲಾಗಿದೆ. ರಾಜ್ಯ ಸರಕಾರ ಕೊಬ್ಬರಿ ಖರೀದಿಗೆ ನೀಡಿರುವ ಈಗೀರುವ ಪ್ರೋತ್ಸಾಹಧನ ರೂ.1225 ಗಳೊಂದಿಗೆ ರೂ.225 ಸೇರಿಸಿ ಒಟ್ಟು 1500 ರೂ.ಗಳನ್ನು ನೀಡುತ್ತದೆ. ಕೇಂದ್ರ ಆದಷ್ಟು ಬೇಗ ಖರೀದಿ ಪ್ರಾರಂಭಿಸಿದರೆ ರೈತರಿಗೆ ಒಳಿತಾಗುತ್ತದೆ ಎಂದು ತಿಳಿಸಿದರು.

# ಬಿಜಿಎಸ್ ಪಬ್ಲಿಕ್ ಶಾಲೆಯಲ್ಲಿ ಚಿಣ್ಣರ ಜಾಣರ ಜಗಲಿ ಕಾರ್ಯಕ್ರಮ



ಧಾರವಾಡ : 10ನೇ ತರಗತಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ತಮ್ಮ ತಂದೆ–ತಾಯಿಗಳ ಪಾದಪೂಜೆ ಮಾಡುವ ಮೂಲಕ ಕಾರ್ಯಕ್ರಮಕ್ಕೆ ಶುಭ ಚಾಲನೆ ಮಾಡುವ ಜೊತೆಗೆ ಗುರು–ಹಿರಿಯರು ಹಾಗೂ ತಂದೆ ತಾಯಿಗಳನ್ನು ಗೌರವಿಸುವ ಪರಂಪರೆಗೆ ಮುನ್ನುಡಿ ಬರೆದಿದ್ದು ವಿಶೇಷವಾಗಿತ್ತು.

ಧಾರವಾಡದ ಮುರುಘಾ ಮಠದ ಡಾ. ಶ್ರೀ ಮಲ್ಲಿಕಾರ್ಜುನ ಮಹಾಸ್ವಾಮೀಜಿಗಳು ಕಾರ್ಯಕ್ರಮದ ದಿವ್ಯಸಾನಿಧ್ಯ ವಹಿಸಿ ಆಶೀರ್ವಚನ ನೀಡಿ ಮಾತನಾಡಿ ವಿದ್ಯಾರ್ಥಿಗಳಲ್ಲಿ ತಮ್ಮ ಪೋಷಕರು ಹಾಗೂ ತಂದೆ–ತಾಯಿಗಳ ಬಗ್ಗೆ ಭಕ್ತಿ ಹಾಗೂ ಗೌರವವನ್ನು ಮೂಡಿಸುವ ಸಂಸ್ಕೃತಿಯನ್ನು ತಮ್ಮ ತಂದೆ ತಾಯಿಗಳಿಗೆ ಪಾದ ಪೂಜೆ ಮಾಡಿಸುವ ಮೂಲಕ ಅಭಿವ್ಯಕ್ತಿಗೊಳಿಸುವಂತೆ ಮಾಡುತ್ತಿರುವುದು ವಿಶೇಷವಾಗಿದೆ.

ಈ ಕಾರ್ಯಕ್ರಮವು ನಮ್ಮ ಸಂಸ್ಕೃತಿಯ ಪ್ರತಿಬಿಂಬವಾದ್ದರಿಂದ ಬಿಜಿಯ ಶಾಲೆಯು ಹಮ್ಮಿಕೊಂಡಿರುವ ಈ ಕಾರ್ಯಕ್ರಮವು ನಾಡಿನ ಎಲ್ಲಾ ಶಾಲೆಗಳಿಗೂ ವಿಸ್ತಾರಗೊಳ್ಳಬೇಕು ಎಂದು ಹೇಳಿದ ಶ್ರೀಗಳು, ವಿದ್ಯಾರ್ಥಿಗಳು ತಮ್ಮ ಜೀವನದಲ್ಲಿ ಶಿಸ್ತು ಸಂಯಮ ಹಾಗೂ ಗುರು ಹಿರಿಯರು ಮತ್ತು ತಂದೆ ತಾಯಿಗಳನ್ನು ಗೌರ ವಿಸುವ ಮನೋಭಾವನೆಯನ್ನು ಬೆಳೆಸಿಕೊಂಡು ಶ್ರದ್ಧಾ ಭಕ್ತಿಯಿಂದ ವ್ಯಾಸಂಗ ಮಾಡಿ ಗುರಿ ಸಾಧನೆ ಮಾಡಬೇಕು ಎಂದು ಹೇಳಿದರು. ನಾಡಿನ ಖ್ಯಾತ ವಾಗ್ಮಿಗಳು ಹಾಗೂ ಹರಟೆ ಖ್ಯಾತಿಯ ಇಂದುಮತಿ ಸಾಲಿಮಠ ಅವರ ನೇತೃತ್ವದಲ್ಲಿ ಚಿನ್ನರ ಜಾಣರ ಜಗಲಿ ಕಾರ್ಯಕ್ರಮವು ವಿಶೇಷವಾಗಿ ನಡೆಯಿತು.

ಇಂದಿನ ಜೀವನಕ್ಕೆ ಹಣ ಮುಖ್ಯವೋ ಅಥವಾ ಗುಣ ಮುಖ್ಯವೋ ಎಂಬ ವಿಷಯದ ಬಗ್ಗೆ ಇಂದುಮತಿ ಸಾಲಿಮಠ ಅವರ ನೇತೃತ್ವದಲ್ಲಿ ಪರ ವಿರೋಧ ಚರ್ಚೆ ನಡೆಸಿ ನಡೆದಿದ್ದ ಪ್ರೇಕ್ಷಕರು ಹಾಗೂ ತಂದೆ–ತಾಯಿಗಳ ಮೆಚ್ಚುಗೆಗೆ ಪಾತ್ರರಾದರು. ಚಿಣ್ಣರ ಜಾಣರ ಜಗಲಿಯ ಮೇಲೆ ಕುಳಿತಿದ್ದ ವಿದ್ಯಾರ್ಥಿಗಳು ನಡೆಸಿಕೊಟ್ಟ ಪರ ವಿರೋಧ ಸಂಭಾಷಣೆಗಳು ಎಲ್ಲರ ಮೆಚ್ಚುಗೆಗೆ ಪಾತ್ರವಾದವು.

ಧಾರವಾಡದ ಬಿಜಿಎಸ್ ಶಿಕ್ಷಣ ಸಂಸ್ಥೆಯ ಮುಖ್ಯಸ್ಥರಾದ ಡಾ. ಜೆ.ಎನ್. ರಾಮಕೃಷ್ಣೇಗೌಡ ಅವರು ಕಾರ್ಯಕ್ರಮದ ನೇತೃತ್ವ ವಹಿಸಿದ್ದರು.

ಸಮಾಜ ಸೇವಕ ಹಾಗೂ ರಾಜ್ಯ ಆರ್.ಟಿ.ಓ ಅಧಿಕಾರಿಗಳ ಸಂಘದ ಅಧ್ಯಕ್ಷ ಮಲ್ಲಿಕಾರ್ಜುನ ಅವರು ಕಾರ್ಯಕ್ರಮದಲ್ಲಿ ವಿಶೇಷ ಆಹ್ವಾನಿತರಾಗಿ ಭಾಗವಹಿಸಿದ್ದರು.

ಕಾರ್ಯಕ್ರಮಕ್ಕೂ ಮುನ್ನ ಜಗದ್ಗುರು, ಯುಗಯೋಗಿ, ಅಕ್ಷರ ಸಂತ, ಭೈರವೈಕ್ಯ ಪದ್ಮಭೂಷಣ ಡಾ. ಶ್ರೀಶ್ರೀ ಬಾಲಗಂಗಾಧರನಾಥ ಮಹಾಸ್ವಾಮೀಜಿಯವರ ಪುತ್ತಳಿಗೆ ವಿಶೇಷ ಪೂಜೆ ಸಲ್ಲಿಸಿ ಭಕ್ತಿ ನಮ ನವನ್ನು ಸಮರ್ಪಿಸಲಾಯಿತು.

“SIHI KAHI” Kannada Daily Morning, Editor, Owner, Publisher, Printer by **MARUTI BASAVANTAPPA HOASAMANI** Published from Chittaragi Cross, S.C. Colony, Ward No. 9, Amingada-587112, Tq. Hungund Dist : Bagalkot, Karnataka and Printed at **SUDIN PRINTERS,** Sector No. 33, Shop No. 38 & 40, Opp. Ambedkar Bhavan, **NAVANAGAR, BAGALKOT-587 101.** Dist : Bagalkot, Karnataka State